ಭಾನುವಾರ 30.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 111
Digital Varthe Kannada Daily
Volume 01 - Issue 111
Sunday 30.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com


## ನಮ್ಮ ವಿರುದ್ಧ ಅಪಪ್ರಚಾರ ಮಾಡಿದರೆ ತಕ್ಕ ಶಾಸ್ತಿ: ಡಾಲು ರವಿ ಎಚ್ಚರಿಕೆ



ನಾವು ನಿಷ್ಠಾವಂತ ಜೆಡಿಎಸ್ ಪಕ್ಷದ ಕಾರ್ಯಕರ್ತರು, ನಮ್ಮ ಮೈಯಲ್ಲಿ ಹರಿಯುತ್ತಿರುವುದು ಜೆಡಿಎಸ್ ಪಕ್ಷದ ರಕ್ತ ನಾವೆಂದಿಗೂ ಪಕ್ಷದ್ರೋಹ ಮಾಡುವುದಿಲ್ಲ ಎಂದು ಮಂಡ್ಯ ಹಾಲು ಒಕ್ಕೂಟದ ನಿರ್ದೇಶಕ ಡಾಲು ರವಿ ಮತ್ತು ಸುಬ್ರಹ್ಮಣ್ಯ ಸೇವಾ ಟ್ರಸ್ಟ್ ಅಧ್ಯಕ್ಷ ಕಿರಣ್ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು.

ಅವರು ಇಂದು ಕೃಷ್ಣರಾಜಪೇಟೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜಂಟಿ ಸುದ್ದಿಗೋಷ್ಠಿ ನಡೆಸಿ ಶಾಸಕ ಮಂಜು ಹಾಗೂ ಅವರ ಬೆಂಬಲಿಗರ ವಿರುದ್ಧ ಆಪಾದನೆಗಳ ಸುರಿಮಳೆಯನ್ನೇ ಸುರಿಸಿದರು.

ಕೃಷ್ಣರಾಜಪೇಟೆ ತಾಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಚುನಾವಣೆ ಸೇರಿದಂತೆ ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ನಿರ್ದೇಶಕರ ಚುನಾವಣೆಯಲ್ಲಿ ನಾವು ಪಕ್ಷದ್ರೋಹವನ್ನು ಎಂದಿಗೂ ಮಾಡಿಲ್ಲ. ಶಾಸಕ ಹೆಚ್.ಟಿ. ಮಂಜು ಅವರು ಶಾಸಕರಾಗಿ ಆಯ್ಕೆಯಾಗಲು ನಮ್ಮನ್ನು ಏಣಿಯಂತೆ ಬಳಸಿಕೊಂಡರು ತಾವು ಶಾಸಕರಾಗಿ ಆಯ್ಕೆಯಾದ ನಂತರ ನಮ್ಮನ್ನು ಸೇರಿದಂತೆ ನಿಷ್ಠಾವಂತ ಕಾರ್ಯಕರ್ತರನ್ನು ಕಡೆಗಣಿಸಿ ನೆನ್ನೆ ಮೊನ್ನೆ ಪಕ್ಷಕ್ಕೆ ಸೇರಿದವರು ಹಾಗೂ ಸ್ವಾರ್ಥ ಸಾಧಕರನ್ನು ತಮ್ಮ ಪಕ್ಕದಲ್ಲಿ ಇಟ್ಟುಕೊಂಡು ಮೆರೆಸುವ ಕೆಲಸ ಮಾಡುತ್ತಿದ್ದಾರೆ ನಾವು ಪಕ್ಷದ್ರೋಹ ಮಾಡಿರುವುದನ್ನು ಶಾಸಕರು ಹಾಗೂ ಅವರ ಬೆಂಬಲಿಗರು ಸಾಬೀತುಪಡಿಸಲಿ ನೋಡೋಣ ಎಂದು ಸವಾಲು ಹಾಕಿದ ಡಾಲು ರವಿ ಹಾಗೂ ಕಿರಣ್ ಸಂಪೂರ್ಣ ಬಹುಮತವನ್ನು ಹೊಂದಿದ್ದ ಕೃಷ್ಣರಾಜಪೇಟೆ ಪುರಸಭೆ ಆಡಳಿತ ಮಂಡಳಿಯನ್ನು ಕಾಂಗ್ರೆಸ್ ಪಕ್ಷಕ್ಕೆ ದಾರಿಯೆರೆದು ಕೊಟ್ಟಿದ್ದು ಶಾಸಕರೇ ಹೊರತು ನಾವಲ್ಲ ಎಂದು ವ್ಯಂಗ್ಯವಾಡಿದರು.

ಟಿಎಪಿಸಿಎಂಎಸ್ ನಿರ್ದೇಶಕರ ಆಯ್ಕೆಗಾಗಿ ನಡೆದ ಚುನಾವಣೆಯಲ್ಲಿ ಜೆಡಿಎಸ್ ಮತ್ತು ಕಾಂಗ್ರೆಸ್ ತಲಾ15 ಸೊಸೈಟಿಗಳಂತೆ ಮತದಾನದ ಹಕ್ಕನ್ನು ಪಡೆದಿದ್ದು, ಸಮಬಲದ ಹೋರಾಟವನ್ನು ನೀಡುತ್ತಿದ್ದವು. ಆದರೆ ಬಳ್ಳೇಕೆರೆ ಸೊಸೈಟಿಯ ಪ್ರತಿನಿಧಿಯು ಯಾವುದೇ ಪಕ್ಷಕ್ಕೆ ಸೇರದೇ ನಿರ್ಣಾಯಕವಾಗಿತ್ತು. ಶಾಸಕ ಮಂಜು ತಮ್ಮ ಸಹೋದರ ಸೇರಿದಂತೆ ಇತರೆ ಇಬ್ಬರು ನಿರ್ದೇಶಕರಿಗೆ ಮಾತ್ರ ಮತವನ್ನು ನೀಡುವಂತೆ ಆ ಅಭ್ಯರ್ಥಿಯ ಮನವೊಲಿಸಿ ಕಿರಣ್ ಅವರನ್ನು ಸೋಲಿಸಲು ತಂತ್ರಗಾರಿಕೆ ನಡೆಸಿದ್ದರಿಂದ ನಾವು ಅನಿವಾರ್ಯವಾಗಿ ಕಿರಣ್ ಅವರ ಗೆಲುವಿಗೆ ಕಾರ್ಯತಂತ್ರ ನಡೆಸಬೇಕಾಯಿತು ಎಂದು ಡಾಲು ರವಿ ಸ್ಪಷ್ಟಪಡಿಸಿದರು. ಎರಡನೇ ಹಂತದ ಪಕ್ಷದ ಕಾರ್ಯಕರ್ತರ ಬೆಳವಣಿಗೆಯನ್ನು ಸಹಿಸದ ಶಾಸಕರು ಒಳಗೊಳಗೆ ತಂತ್ರಗಾರಿಕೆ ಮಾಡಿ ಕುತಂತ್ರ ರಾಜಕಾರಣ ಮಾಡುತ್ತಾ ತಮ್ಮ ಗೆಲುವಿಗಾಗಿ ದುಡಿದಂತಹ ಅವರನ್ನೇ ದೂರ ಬಿಟ್ಟು ಇತ್ತೀಚಿಗೆ ಪಕ್ಷ ಸೇರಿರುವ ಪುಡಾರಿಗಳ ಮಾತಿಗೆ ಮನ್ನಣೆ ನೀಡುತ್ತಾ ನಿಷ್ಠಾವಂತ ಕಾರ್ಯಕರ್ತರನ್ನು ಅವಮಾನಿಸಿ ಮನೆಯಲ್ಲಿಯೇ ಕೋರುವಂತೆ ಮಾಡುತ್ತಿದ್ದಾರೆ ಶಾಸಕ ಮಂಜು ಅವರ ಗೆಲುವಿಗಾಗಿ ನಾವಿಬ್ಬರು ನಡೆಸಿರುವ ಪಕ್ಷದ ಸಂಘಟನೆ ಹಾಗೂ ಹೋರಾಟ ತಾಲೂಕಿನ ಜನತೆಗೆ ಸಂಪೂರ್ಣವಾಗಿ ಗೊತ್ತಿದೆ ಇಲ್ಲಸಲ್ಲದ ಸುಳ್ಳು ಆರೋಪಗಳನ್ನು ಮಾಡುತ್ತಿರುವ ಶಾಸಕರು ಹಾಗೂ ಅವರ ಹಿಂಬಾಲಕರು ನೇರವಾಗಿ ಬಹಿರಂಗ ಚರ್ಚೆಗೆ ಬಂದು ನಾವು ಮಾಡಿರುವ ತಪ್ಪುಗಳು ಹಾಗೂ ಪಕ್ಷ ವಿರೋಧಿ ಚಟುವಟಿಕೆಗಳ ಬಗ್ಗೆ ರಜುವಾತು ಮಾಡಿ ತೋರಿಸಲಿ ಎಂದು ಡಾಲು ರವಿ ಹಾಗೂ ಕಿರಣ್ ಸವಾಲು ಹಾಕಿದರು.

ಮಂಡ್ಯ ಹಾಲು ಒಕ್ಕೂಟದ ಚುನಾವಣೆಯಲ್ಲಿ ನಿರಂತರವಾಗಿ ಮೂರು ಬಾರಿ ಗೆದ್ದು ನಿರ್ದೇಶಕನಾಗಿ ರೈತ ಪರವಾಗಿ ಕೆಲಸ ಮಾಡುತ್ತಿರುವ ನಾನು 2028ನೇ ರಲ್ಲಿ ನಡೆಯಲಿರುವ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಪಕ್ಷದ ವತಿಯಿಂದ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಲು ಸಿದ್ಧತೆ ನಡೆಸುತ್ತಿರುವುದನ್ನು ಸಹಿಸದ ಶಾಸಕರು ನಮ್ಮನ್ನು ಉದ್ದೇಶಪೂರ್ವಕವಾಗಿಯೇ ದೂರ ಬಿಟ್ಟು ನಮ್ಮ ವಿರುದ್ಧ ಇಲ್ಲ ಸಲ್ಲದ ಸುಳ್ಳು ಆರೋಪ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮಾನ್ಯ ಶಾಸಕರು ಹಾಗೂ ಅವರ ಬೆಂಬಲಿಗರು ನಮ್ಮಗಳ ವಿರುದ್ಧ ಇಲ್ಲಸಲ್ಲದ ಸುಳ್ಳು ಅಪಪ್ರಚಾರ ಮಾಡುವುದನ್ನು ನಿಲ್ಲಿಸದಿದ್ದರೆ ಶಾಸಕರು ನಡೆಸಿರುವ ಪಕ್ಷ ವಿರೋಧಿ ಚಟುವಟಿಕೆಗಳು ಹಾಗೂ ನಿಷ್ಠಾವಂತ ಕಾರ್ಯಕರ್ತರುಗಳ ಮೇಲೆ ನಡೆಸಿರುವ ದಬ್ಬಾಳಿಕೆ ದೌರ್ಜನ್ಯಗಳನ್ನು ಎಳೆ ಎಳೆಯಾಗಿ ಬಿಚ್ಚಿಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು ,

ಪತ್ರಿಕಾಗೋಷ್ಠಿಯಲ್ಲಿ ಆನೆಗಳ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಐಕನಹಳ್ಳಿ ಬಾಲಚಂದ್ರ,

## ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಸಿ.ಡಿ. ಗಂಗಾಧರ್ ಆದೇಶ: ಸದಸ್ಯ ಕೆ.ಬಿ. ಮಹೇಶ್, ನಿರ್ದೇಶಕ ಚಕ್ರಪಾಣಿ ಅಮಾನತ್ತು



ಕಾಂಗ್ರೆಸ್ ಮುಖಂಡ ಪುರಸಭಾ ಮಾಜಿ ಅಧ್ಯಕ್ಷ ಹಾಲಿ, ಸದಸ್ಯ ಕೆ.ಬಿ ಮಹೇಶ್,ಕಸಬಾ ಸೊಸೈಟಿ ನಿರ್ದೇಶಕ ಕೆ.ಟಿ ಚಕ್ರಪಾಣಿ ಅವರು ಕಾಂಗ್ರೆಸ್ ಪಕ್ಷದಲ್ಲಿ ಇದ್ದುಕೊಂಡು ಪಕ್ಷ ವಿರೋಧ ಚಟುವಟಿಕೆ ಮಾಡಿದ್ದಾರೆ ಎಂದು ಮಂಡ್ಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ ಗಂಗಾಧರ್ ಗಂಭೀರವಾಗಿ ಆರೋಪಿಸಿ ಕಾಂಗ್ರೆಸ್ ಪಕ್ಷದಿಂದ ಕಾಂಗ್ರೆಸ್ ಮುಖಂಡ ಪುರಸಭಾ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಕೆ.ಬಿ ಮಹೇಶ್,ಕಸಬಾ ಸೊಸೈಟಿ ನಿರ್ದೇಶಕ ಕೆ.ಟಿ ಚಕ್ರಪಾಣಿ ಅವರನ್ನ ಅಮಾನತುಗೊಳಿಸಿ ಆದೇಶ ಹೊರಡಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು ದಿನಾಂಕ ನಂಬರ್ 2, ರಂದು ಮಂಡ್ಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಚುನಾವಣೆ ಚುನಾವಣೆಯಲ್ಲಿ ಕೃಷ್ಣರಾಜಪೇಟೆ ವ್ಯವಸಾಯೋತ್ಪನ್ನ ಪತ್ತಿನ ಸಹಕಾರ ಸಂಘದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿಗೆ ಮತದಾನ ಮಾಡುವ ಪ್ರತಿನಿಧಿಯಾಗಿ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರಾದ ಕೆ.ಟಿ. ಚಕ್ರಪಾಣಿ ಮತದಾನದ ಹಕ್ಕನ್ನು ಪಡೆದುಕೊಂಡು. ನಮ್ಮ ನಾಯಕ ಎನ್. ಚಲುವರಾಯಸ್ವಾಮಿ, ಜಿಲ್ಲಾ ಅಧ್ಯಕ್ಷರು ಮತ್ತು ತಾಲ್ಲೂಕಿನ ಕಾಂಗ್ರೆಸ್ ಮುಖಂಡರು ನೇತೃತ್ವದಲ್ಲಿ ಡಿ.ಸಿ.ಸಿ.ಬ್ಯಾಂಕ್ ಚುನಾವಣೆಗೆ ಕೃಷ್ಣರಾಜಪೇಟೆ ಕ್ಷೇತ್ರದಿಂದ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಅಂಬರೀಶ್ ರವರು ಚುನಾವಣೆಗೆ ಸ್ಪರ್ಧಿಸಿದ್ದ ಅಂಬರೀಶ್ ರವರಿಗೆ ಮತದಾನ ಮಾಡುವಂತೆ ಕೆ.ಟಿ.ಚಕ್ರಪಾಣಿ ರವರಲ್ಲಿ ವಿನಂತಿಸಿದ್ದರೂ ಕೂಡ, ಪಕ್ಷದ ಬೆಂಬಲಿತ ಅಭ್ಯರ್ಥಿಯ ವಿರುದ್ಧ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಜನತಾದಳದ ಬೆಂಬಲಿತ ಅಭ್ಯರ್ಥಿಯ ಪರವಾಗಿ ಮತಚಲಾಯಿಸಿದರು.ಕೆ.ಆರ್.ಪೇಟೆಯ ಮಾಜಿ ಪುರಸಭಾ ಸದಸ್ಯ ಕೆ.ಬಿ.ಮಹೇಶ್ ರವರು ಜನತಾದಳದ ಬೆಂಬಲಿತ ಅಭ್ಯರ್ಥಿಗೆ ಮತ ನೀಡುವಂತೆ ಕೆ.ಟಿ.ಚಕ್ರಪಾಣಿ ಮತ್ತು ಸೇರಿದಂತೆ ಪ್ರತಿನಿಧಿಗಳಿಗೆ ಒತ್ತಡ ತಂದಿರುವುದು ದೃಢಪಟ್ಟಿದೆ ಆದ್ದರಿಂದ ಕಾಂಗ್ರೆಸ್ ಪಕ್ಷದ ನಿಯಮಾವಳಿಗಳ ಪ್ರಕಾರ ಕೆ.ಟಿ.ಚಕ್ರಪಾಣಿ ಮತ್ತು ಕೆ.ಬಿ.ಮಹೇಶ್ ರವರ ಪಕ್ಷ ವಿರೋಧ ಚಟುವಟಿಕೆಗಳನ್ನು ಖಂಡಿಸದರು ,

ಶಾಸಕ ಎಚ್.ಟಿ.ಮಂಜು ವಿರುದ್ಧ ವಾಕ್ಸಮರ- ಐಪನಹಳ್ಳಿ ನಾಗೇಂದ್ರ ಕುಮಾರ್;

ಸುದ್ದಿಗೋಷ್ಠಿಯಲ್ಲಿ ಐಪನಹಳ್ಳಿ ನಾಗೇಂದ್ರ ಕುಮಾರ್ ಮಾತನಾಡಿ ಕೃಷ್ಣರಾಜಪೇಟೆ ಶಾಸಕ ಹೆಚ್.ಟಿ ಮಂಜು ಅವರು ಗೌರವಾನ್ವಿತ ಸ್ಥಾನದಲ್ಲಿದ್ದಾರೆ ಎಂಬುದನ್ನು ಮೈಮರೆತು ನಮ್ಮ ನಾಯಕ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ವಿರುದ್ಧ ಏಕವಚನದಲ್ಲಿ ಮಾತನಾಡಿದರೆ ನಾಯಕನಾಗುತ್ತೇನೆ ಎಂಬ ಕನಸಿನಲ್ಲಿ ಇರಬಹುದು ಅದು ಅಸಾಧ್ಯ ಮೊದಲು ಕ್ಷೇತ್ರದ ಸಮಗ್ರ ಅಭಿವೃದ್ಧಿ ಬಗ್ಗೆ ಚಿಂತಿಸಲಿ ಅದಕ್ಕೆ ನಾವು ನಮ್ಮ ನಾಯಕರು ಸಹಕರಿಸುತ್ತೇವೆ ಅದನ್ನ ಬಿಟ್ಟು ಪ್ರತಿಯೊಂದುಕ್ಕೂ ರಾಜಕಾರಣ ಬೆರೆಸಬೇಡಿ ಎಂದು ಶಾಸಕ ಎಚ್.ಟಿ.ಮಂಜು ವಿರುದ್ಧ ವಾಕ್ಸಮರ ನಡೆಸಿದರು.

ಡಿ.ಸಿ.ಸಿ.ಬ್ಯಾಂಕ್ ನೂತನ ನಿರ್ದೇಶಕ ಶೀಳನೆರೆ ಅಂಬರೀಷ್ ನನ್ನ ಗೆಲುವಿಗೆ ಪರವಾಗಿ ಪರೋಕ್ಷವಾಗಿ ಶ್ರಮವಹಿಸಿದ ಪ್ರತಿಯೊಬ್ಬ ಮುಖಂಡರಿಗೂ ಕೃತಜ್ಞತೆ ಸಲ್ಲಿಸಿದರು.

ಈ ಸುದ್ದಿಗೋಷ್ಠಿಯಲ್ಲಿ ಡಿ.ಸಿ.ಸಿ ಬ್ಯಾಂಕ್ ನೂತನ ನಿರ್ದೇಶಕ ಶೀಳನೆರೆ ಅಂಬರೀಷ್, ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷ ಕಬ್ಬಲುಗೆರೆ ಪುಟ್ಟಸ್ವಾಮಿಗೌಡ,ಗ್ಯಾರಂಟಿ ಸಮಿತಿಯ

ನಮ್ಮ ಪಕ್ಷದ ವರಿಷ್ಠರಾದ ಎನ್. ಚಲುವರಾಯಸ್ವಾಮಿಯ, ಸ್ಥಳೀಯ ಮಾಜಿ ಶಾಸಕರಾದ ಕೆ.ಬಿ ಚಂದ್ರಶೇಖರ್, ಬಿ.ಪ್ರಕಾಶ್ ಟಿ.ಎ.ಪಿ.ಸಿ.ಎಂ.ಎಸ್ ಮಾಜಿ ಅಧ್ಯಕ್ಷ ಬಿ.ಎಲ್ ದೇವರಾಜು,ತಾಲ್ಲೂಕು ಕಾಂಗ್ರೆಸ್ ಮುಖಂಡರಾದ ಹಾಗೂ ಜಿಲ್ಲಾ ಹಾಗೂ ಕಾಂಗ್ರೆಸ್ ಸಮಿತಿ ನಿರ್ಧಾರದ ಮೇರೆಗೆ ತಕ್ಷಣದಿಂದಲೇ ಕೆ.ಬಿ ಮಹೇಶ್,ಕೆ.ಟಿ ಚಕ್ರಪಾಣಿ ಅವರನ್ನ ಕಾಂಗ್ರೆಸ್ ಪಕ್ಷದ ಎಲ್ಲಾ ಚಟುವಟಿಕೆಗಳಿಂದ ಮುಂದಿನ ಆದೇಶದ ವರೆಗೆ ಅಮಾನತ್ತು ಮಾಡಲಾಗಿದೆ ಎಂದು ತಿಳಿಸಿದರು.

## ಕರ್ನಾಟಕ ಪುರುಷ ಆಯೋಗ ರಚನೆಗೆ ಸರ್ಕಾರಕ್ಕೆ ಒತ್ತಾಯ: ಆನಂದ್ ಸಿ. ತಿರುಮಲ



ಪುರುಷ ಆಯೋಗ ರಚನೆ ಗಾಗಿ ಒತ್ತಾಯಿಸಿ ರಾಜ್ಯದಲ್ಲಿ ಸಾವಿರಾರು ಪ್ರಕರಣಗಳಿಂದ ಪುರುಷರು ಮನ ನೊಂದು ಆತ್ಮಹತ್ಯೆ ಮಾಡಿಕೊಳುತ್ತಿದರೆ ಇದನ್ನು ತಡೆ ಗಟ್ಟಲು ರಾಜ್ಯದಲ್ಲಿ ಪುರುಷ ಆಯೋಗವನ್ನೂ ರಚಿಸಬೇಕೆಂದು ಕರ್ನಾಟಕ ರಾಜ್ಯ ಪುರುಷ ಆಯೋಗ ರಚನಾ ಸಮಿತಿಯವರು ಆಗ್ರಹಿಸಿದಾರೆ

ಬೆಂಗಳೂರು: ರಾಜ್ಯದಲ್ಲಿ ವಿವಿಧ ಇಲಾಖೆಯ ಆಯೋಗ ರಚನೆಯಾದ ರೀತಿಯಲ್ಲೇ ಪುರುಷರ ಆಯೋಗವನ್ನೂ ರಚಿಸಬೇಕೆಂದು ಕರ್ನಾಟಕ ರಾಜ್ಯ ಪುರುಷರ ಆಯೋಗ ರಚನಾ ಸಮಿತಿಯವರು ಆಗ್ರಹಿಸಿದರು. ಪ್ರಸ್ತುತ ದಿನಗಳಲ್ಲಿ ಮಹಿಳೆಯಾರಿಗಿಂತ ಪುರುಷರಿಗೆ ಅನ್ಯಾಯವಾಗುತ್ತಿದು. ಮಾನಸಿಕ ಮತ್ತು ಧೈಹಿಕ ಹಿಂಸೆ ಅನುಭವಿಸುತ್ತಿದಾರೆ

ಆದರೇ ಮಹಿಳೆಯರಿಗೆ ಇರುವಂತ ಕಾನೂನು ದುರುಪಯೋಗ ವಾಗುತ್ತಿದೆ ಆನೇಕ ಸಂದರ್ಭದಲ್ಲಿ ಪುರುಷ ಮೇಲೆ ದೌರ್ಜನ್ಯ ನಡೆಯುತ್ತಿದೆ ಇದನ್ನು ತಡೆ ಗಟ್ಟಲು ಸಾಧ್ಯವಾಗುತ್ತಿಲ್ಲ ಮಹಿಳೆಯರಂತೆ ಪುರುಷರೂ ಕೂಡ ಸಮಾಜದ ಭಾಗವಾಗಿದ್ದಾರೆ ಎಂಬುದನ್ನು ಮನಗಂಡು ಸರ್ಕಾರ ಪುರುಷರ ಆಯೋಗವನ್ನು ರಚಿಸಬೇಕು.

ಮಹಿಳಾ ಆಯೋಗ ರಚಿತವಾಗಿರುವ ರೀತಿಯಲ್ಲಿಯೇ ಪುರುಷರ ಆಯೋಗವೂ ರಚನೆಯಾಗಬೇಕು" ಎಂದು ಸಮಿತಿ ಒತ್ತಾಯಿಸಿದೆ.

ಈ ಸಂಬಂಧ ಸಭೆ ಕರೆದು ಮಾತನಾಡಿದ ಆನಂದ್ ಸಿ ತಿರುಮಲ ರವರು ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ಕಚೇರಿಗೆ ಭೇಟಿ ಮಾಡಿ ಸರ್ಕಾರವನ್ನು ಒತ್ತಾಯ ಮಾಡಲು ನಿರ್ಧಾರಕ್ಕೆ ಬಂದಿದ್ದೆವೆ ಇತ್ತೀಚಿಗೆ ಯಾವುದೇ ಪೊಲೀಸ್ ಠಾಣೆಗಳಲ್ಲಿ ಪುರುಷರಿಗೆ ನ್ಯಾಯ ಸಿಗುತ್ತಿಲ್ಲ. ಮನೆಯಲ್ಲಿ ಮಹಿಳೆಯರು ಪುರುಷರ ಸ್ವಾತಂತ್ರ್ಯವನ್ನು ಕಿತ್ತುಕೊಂಡಿದ್ದಾರೆ. ಚಿಕ್ಕ ವಿಷಯಗಳನ್ನು ದೊಡ್ಡದು ಮಾಡಿ ವಿಚ್ಚೇದನ ಹಂತಕ್ಕೆ ತೆಗೆದುಕೊಂಡು ಹೋಗುತ್ತಿದ್ದಾರೆ. ಮಹಿಳೆಯರಿಂದ ಪುರುಷರು ಶೋಷಣೆಗೊಳಗಾಗುತ್ತಿದ್ದಾರೆ,

ಕರ್ನಾಟಕ ರಾಜ್ಯ ಪುರುಷರ ಆಯೋಗ ರಚನಾ ಸಮಿತಿ ,"ಸರಕಾರಗಳು ಮಹಿಳೆಯರನ್ನು 'ಮತ ಬ್ಯಾಂಕ್' ರಾಜಕಾರಣಕ್ಕೆ ಬಳಸಿಕೊಳ್ಳುತ್ತಿವೆ. ಪುರುಷರು ತಮ್ಮ ನೋವನ್ನು ಹೇಳಿಕೊಳ್ಳಲು ಅನುಕೂಲವಾಗುವಂತೆ ಆಯೋಗವನ್ನು ರಚಿಸುವ ಅಗತ್ಯ ಇದೆ. ಪುರುಷರು ಹೆಂಡತಿ, ಮಕ್ಕಳಿಂದ ತೊಂದರೆಗೊಳಗಾದರೆ ಅದನ್ನು ಅವರು ಎಲ್ಲಿ ಪ್ರಶ್ನೆ ಮಾಡಬೇಕು" ಎಂದು ಸರ್ಕಾರವನ್ನು ಒತ್ತಾಯಿಸಿಲಾಗಿದೆ

ಇನ್ನು ಕಾರ್ಯಕ್ರಮದಲ್ಲಿ ಸಮಿತಿಯ ನಾಯಕರು ಶ್ರೀ ಸಂಘಮೇಶ್, ಗೌತಮ್ ವೆಂಕಿ, ಯುವ ಬ್ರಿಗೇಡ್ ಮುನಿಕುಮಾರ್,ಗುರುಮೂರ್ತಿ, ರಂಗನಾಥ್, ಆನೇಕರು ಭಾಗವಹಿಸಿದರು

## ಕಾಂಗ್ರೆಸ್ ಕಾರ್ಯಕರ್ತರ ಒತ್ತಾಯ: ಮಾಜಿ ಪುರಸಭೆ ಅಧ್ಯಕ್ಷ ಕೆ.ಬಿ. ಮಹೇಶ್ ಅಮಾನತು ರದ್ದುಪಡಿಸಬೇಕು



ಡಿಸಿಸಿ ಬ್ಯಾಂಕ್ ನಿರ್ದೇಶಕರ ಚುನಾವಣೆಯಲ್ಲಿ ಪಕ್ಷ ವಿರೋಧಿ ಚಟುವಟಿಕೆ ನಡೆಸಿದ್ದಾರೆಂದು ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರಾದ ಪುರಸಭೆ ಮಾಜಿ ಅಧ್ಯಕ್ಷ ಕೆ.ಬಿ.ಮಹೇಶ್ ಅವರನ್ನು ಕಾಂಗ್ರೆಸ್ ಪಕ್ಷದಿಂದ ಅಮಾನತ್ತು ಮಾಡಿರುವ ಕ್ರಮವು ಸರಿಯಾದುದ್ದಲ್ಲ, ಕೂಡಲೇ ಅವರ ಅಮಾನತು ಆದೇಶವನ್ನು ಹಿಂಪಡೆಯಬೇಕು ಎಂದು ನೂರಾರು ಸಂಖ್ಯೆಯಲ್ಲಿ ಕಾರ್ಯಕರ್ತರು ಸಭೆ ನಡೆಸಿ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಯವರನ್ನು ಆಗ್ರಹಿಸಿದರು.

ಕೃಷ್ಣರಾಜಪೇಟೆ ಪಟ್ಟಣದ ಪ್ರವಾಸಿ ಮಂದಿರದ ಆವರಣದಲ್ಲಿ ನೂರಾರು ಸಂಖ್ಯೆಯಲ್ಲಿ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು ದಲಿತ ಮುಖಂಡ ಬಸ್ತಿ ರಂಗಪ್ಪ ಅವರ ನೇತೃತ್ವದಲ್ಲಿ ಸಭೆ ನಡೆಸಿ ಪುರಸಭೆ ಮಾಜಿ ಅಧ್ಯಕ್ಷ ಕೆ.ಬಿ. ಮಹೇಶ್ ಅವರ ಅಮಾನತ್ತನ್ನು ಕಾಂಗ್ರೆಸ್ ಪಕ್ಷವು ಕೂಡಲೇ ವಾಪಸ್ ಪಡೆದು ಕೃಷ್ಣರಾಜಪೇಟೆ ತಾಲೂಕಿನ ಪಕ್ಷದ ಸಂಘಟನೆಯ ಜವಾಬ್ದಾರಿಯನ್ನು ಕೆ.ಬಿ. ಮಹೇಶ್ ಅವರಿಗೆ ವಹಿಸಬೇಕು ಎಂದು ಒತ್ತಾಯಿಸಿತು.

ಬಿಳಿಯ ಬಟ್ಟೆಗೆ ಗಂಜಿ ಹಾಕಿಸಿ ಗರಿಯಾದ ಬಟ್ಟೆಯನ್ನು ಇಸ್ತ್ರಿ ಮಾಡಿಸಿ ಹಾಕಿಕೊಂಡು ಕಾಂಗ್ರೆಸ್ ವರಿಷ್ಠರ ಹತ್ತಿರ ಓಡಾಡಿಕೊಂಡು ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಮರೆತು ಸ್ವಾರ್ಥ ಸಾಧನೆ ಮಾಡುತ್ತಿರುವ ಕಾಂಗ್ರೆಸ್ ನಾಯಕರ ಚಾಡಿಯ ಮಾತನ್ನು ಕೇಳಿಕೊಂಡು, ಮಂಡ್ಯ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಸಿ.ಡಿ. ಗಂಗಾಧರ್ ಅವರು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾದ ಕೆ.ಬಿ.ಮಹೇಶ ಅವರನ್ನು ಯಾವುದೇ ಸಕಾರಣವಿಲ್ಲದೆ ಕಾಂಗ್ರೆಸ್ ಪಕ್ಷದ ಚಟುವಟಿಕೆಗಳಿಂದ ದೂರವಿಟ್ಟು ಅಮಾನತ್ತು ಮಾಡಿರುವುದು ಸರಿಯಾದ ಕ್ರಮವಲ್ಲ. ಸಿ.ಡಿ.ಗಂಗಾಧರ್ ಅವರು ಕೂಡಲೇ ಕಾಂಗ್ರೆಸ್ ಪಕ್ಷದಿಂದ ಮಹೇಶ್ ಅವರನ್ನು ಅಮಾನತ್ತು ಮಾಡಿರುವ ಆದೇಶವನ್ನು ವಾಪಸ್ ಪಡೆದು ಮಹೇಶ್ ಅವರಿಗೆ ಪಕ್ಷದ ಸಂಘಟನೆಯ ಜವಾಬ್ದಾರಿಯನ್ನು ವಹಿಸಬೇಕು. ಕೃಷ್ಣರಾಜಪೇಟೆ ತಾಲೂಕಿನಲ್ಲಿ ಸಂಪೂರ್ಣವಾಗಿ ನೆಲಕಚ್ಚಿ ಧೂಳಿಪಟವಾಗುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಚೈತನ್ಯ ನೀಡುವ ಶಕ್ತಿ ಇರುವುದು ಮಹೇಶ್ ಅವರಿಗೆ ಮಾತ್ರ ಎಂಬ ಸತ್ಯವನ್ನು ಕಾಂಗ್ರೆಸ್ ವರಿಷ್ಠರು ಅರಿಯಬೇಕು ಎಂದು ಕಾಂಗ್ರೆಸ್ ಕಾರ್ಯಕರ್ತರು ಆಗ್ರಹಿಸಿ, ಗಂಗಾಧರ್ ವಿರುದ್ಧ ಕಿಡಿ ಕಾರಿದರು.

ಕೃಷ್ಣರಾಜಪೇಟೆ ಪುರಸಭೆಯ ಅಧ್ಯಕ್ಷರಾಗಿ ಹತ್ತಾರು ಜನೋಪಯೋಗಿ ಕೆಲಸಗಳನ್ನು ಮಾಡುವ ಮೂಲಕ ಶ್ರೀಸಾಮಾನ್ಯರ ನೋವಿಗೆ ಧನಿಯಾಗಿ ದುಡಿದು ಕೆಲಸ ಮಾಡುತ್ತಿರುವ ಕೆ.ಬಿ. ಮಹೇಶ್ ಅವರನ್ನು ತಾಲೂಕಿನ ಜನತೆ ಮುಂಬರುವ ವಿಧಾನ ಸಭಾ ಚುನಾವಣೆಯಲ್ಲಿ ಶಾಸಕರಾಗಬೇಕೆಂದು ಬಯಸುತ್ತಿದೆ. ಮಹೇಶ್ ಅವರನ್ನು ಸಕಾರಣವಿಲ್ಲದೇ ಮಂಡ್ಯ ಜಿಲ್ಲಾ ಕೇಂದ್ರ ಬ್ಯಾಂಕ್ ನಿರ್ದೇಶಕರ ಚುನಾವಣೆಯಲ್ಲಿ ಚಕ್ರಪಾಣಿ ಅವರಿಗೆ ಅಡ್ಡ ಮತದಾನ ಮಾಡಲು ಕುಮ್ಮಕ್ಕು ನೀಡಿದರು ಎನ್ನುವ ಆರೋಪವೇ ಸುಳ್ಳಿನ ಕಂತೆಯಾಗಿದೆ. ಮಹೇಶ್ ಅವರು ಡಿಸಿಸಿ ಬ್ಯಾಂಕ್ ನಿರ್ದೇಶಕರ ಆಯ್ಕೆಗೆ ಮತದಾನ ಮಾಡುವ ಹಕ್ಕನ್ನೇ ಹೊಂದಿಲ್ಲ, ವಾಸ್ತವವಾಗಿ ಅವರು ಯಾವುದೇ ಸಂಘ ಸಂಸ್ಥೆಯ ಪ್ರತಿನಿಧಿಯಲ್ಲ ಇಟ್ಟಾದರೂ ಕೂಡ ಪಕ್ಷ ವಿರೋಧಿ ಚಟುವಟಿಕೆ ನಡೆಸಿದರು ಎಂದು ಸುಳ್ಳು ಆರೋಪ ಹೊರಿಸಿ ಪಕ್ಷದಿಂದ ಅಮಾನತ್ತು ಮಾಡಿರುವುದು ಸರಿಯಲ್ಲ. ಸದ್ಯದಲ್ಲಿಯೇ ತಾಲೂಕು, ಜಿಲ್ಲಾ ಪಂಚಾಯಿತಿ ಹಾಗೂ ಪುರಸಭಾ ಚುನಾವಣೆಯು ಬರುತ್ತಿರುವ ಸಂದರ್ಭದಲ್ಲಿ ಮಹೇಶ್ ಅವರನ್ನು ಕಾಂಗ್ರೆಸ್ ಪಕ್ಷದಿಂದ ಅಮಾನತ್ತು ಮಾಡಿರುವುದು ತಾಲೂಕಿನ ಜನತೆಗೆ ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಗೆ ತಪ್ಪು ಸಂದೇಶ ಹೋಗಿ ಕಾಂಗ್ರೆಸ್ ಪಕ್ಷಕ್ಕೆ ಹೊಡೆತ ಬೀಳುವ ಸಂಭವ ಇರುವುದರಿಂದ ವರಿಷ್ಠರು ಕೂಡಲೇ ಎಚ್ಚೆತ್ತುಕೊಂಡು ಕೃಷ್ಣರಾಜಪೇಟೆ ತಾಲೂಕಿನಲ್ಲಿ ಕಾಂಗ್ರೆಸ್ ಪಕ್ಷದ ಬಲವರ್ಧನೆಗಾಗಿ ದುಡಿಯುತ್ತಿರುವ ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್ ಹಾಗೂ ಪುರಸಭೆ ಮಾಜಿ ಅಧ್ಯಕ್ಷ ಕೆಬಿ ಮಹೇಶ್ ಅವರಿಗೆ ನೈತಿಕವಾಗಿ ಶಕ್ತಿ ತುಂಬಿ ಪಕ್ಷ ಸಂಘಟನೆಯ ಜವಾಬ್ದಾರಿಯನ್ನು ತಾಲೂಕಿನ ಭವಿಷ್ಯದ ನಾಯಕರಾಗಿ ಹೊರ ಹೊಮ್ಮುತ್ತಿರುವ ಕೆ. ಬಿ.ಮಹೇಶ್ ಅವರಿಗೆ ನೀಡಬೇಕು ಎಂದು ಕಾರ್ಯಕರ್ತರು ಕಾಂಗ್ರೆಸ್ ವರಿಷ್ಠರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚೆಲುವರಾಯ ಸ್ವಾಮಿಯವರನ್ನು ಆಗ್ರಹಿಸಿದರು.

ಸಭೆಯಲ್ಲಿ ದಲಿತ ಮುಖಂಡರಾದ ಬಸ್ತಿರಂಗಪ್ಪ, ಹೊಸಹೊಳಲು ಪುಟ್ಟರಾಜು, ಕಲ್ಪನಾ ದೇವರಾಜು, ಸೌಭಾಗ್ಯ ಉಮೇಶ್, ಕೆ.ಬಿ. ಪ್ರಕಾಶ್, ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಪ್ರವೀಣ್ ಕುಮಾರ್, ಮುಖಂಡರಾದ ಸೋಮೇಗೌಡ, ಮಾಕವಳ್ಳಿ ಸಾಯಿ ಸುಮಿತ್, ಕೆ.ಬಿ.ಕಾಳಯ್ಯ, ವಿಠಲಾಪುರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹರೀಶ್, ನವೀದ್ ಅಹಮದ್, ಹಾಫಿಜುಲ್ಲಾ ಷರೀಫ್, ಕೊಮ್ಮೇನಹಳ್ಳಿ ಹರೀಶ್ ಸೇರಿದಂತೆ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಸಭೆಯಲ್ಲಿ ಭಾಗವಹಿಸಿದ್ದರು.

## ರಾಷ್ಟ್ರಗೀತೆ ಸಾಮೂಹಿಕವಾಗಿ ಹಾಡಬೇಕು, ಮೊಬೈಲ್-ಡಿಜೆ ಬಳಕೆ ತಪ್ಪು: ವಕೀಲ ನಯಾಜ್ ಪಾಷಾ



ಪಿ.ಡಿ.ಎನ್.ಎ. ಭ್ರಷ್ಟಾಚಾರ ನಿಗ್ರಹದಳ ಸಂಸ್ಥೆ ಕೃಷ್ಣರಾಜಪೇಟೆ ತಾಲೂಕು ಘಟಕದ ವತಿಯಿಂದ ರಾಷ್ಟ್ರಗೀತೆಯ ಘನತೆಯನ್ನು ಕಾಪಾಡುವ ರಾಷ್ಟ್ರವ್ಯಾಪಿ ಅಭಿನಯಾನ ಅಡಿಯಲ್ಲಿ ತಾಲೂಕಿನ ಗ್ರೇಡ್ 2 ತಹಸೀಲ್ದಾರ್ ಬಿ.ಆರ್. ಲೋಕೇಶ್ ರವರಿಗೆ ಮನವಿ ಸಲ್ಲಿಸಲಾಯಿತು,

ನಂತರ ಮಾತನಾಡಿದ ಕಾನೂನು ಸಲಹೆಗಾರ ವಕೀಲ ನಯಾಜ್ ಪಾಷಾ ರವರು ಅತ್ಯಂತ ನಾಗರಿಕರಲ್ಲಿ ವಿಶೇಷವಾಗಿ ಯುವ ಪೀಳಿಗೆಯಲ್ಲಿ ನಮ್ಮ ರಾಷ್ಟ್ರಗೀತೆ ಜನ ಗಣ ಮನದ ಗೌರವ ಮತ್ತು ಅರಿವನ್ನ ಪುನರ್ ಸ್ಥಾಪಿಸುವುದು ಮತ್ತು ಇತ್ತೀಚಿನ ದಿನಗಳಲ್ಲಿ ರಾಷ್ಟ್ರಗೀತೆಯನ್ನು ಜನರು ಸ್ವಂತ ಹಾಡುವ ಬದಲು mp3. ಡಿಜೆ ವ್ಯವಸ್ಥೆಗಳು ಮತ್ತು ಬ್ಲೂಟೂತ್. ಸ್ಪೀಕರ್ ಮೂಲಕ ನುಡಿಸುವುದು ಸಾಮಾನ್ಯ ಅಭ್ಯಾಸ ಮಾಡಿಕೊಂಡಿದ್ದರೆ,

ದುಃಖಕರವೆಂದರೆ 20% ಗಿಂತ ಹೆಚ್ಚು ಭಾರತೀಯರು ವಿಶೇಷವಾಗಿ ಯುವಕರು ಪೂರ್ಣ ರಾಷ್ಟ್ರಗೀತೆಯನ್ನು ಸರಿಯಾಗಿ ಹಾಡಲು ಸಾಧ್ಯವಾಗುತ್ತಿಲ್ಲ, ಈ ಪ್ರವೃತ್ತಿ ಮುಂದುವರೆದರೆ ಭವಿಷ್ಯದ ಪೀಳಿಗೆಗಳು ನಮ್ಮ ರಾಷ್ಟ್ರಗೀತೆಯ ನಿಜವಾದ ಸಾರವನ್ನು ಮರೆತುಬಿಡುವ ಆಗಿದೆ, ನಮ್ಮ ರಾಷ್ಟ್ರಗೀತೆ ಕೇವಲ ಹಾಡಲ್ಲ, ನಮ್ಮ ಏಕತೆ ತ್ಯಾಗ ಮತ್ತು ಬಲಿದಾನ ರಾಷ್ಟ್ರೀಯ ಹೆಮ್ಮೆಯ ಧ್ವನಿಯಾಗಿದೆ ಆದ್ದರಿಂದ ಧ್ವನಿವರ್ಧಕಗಳಲ್ಲಿ ಕೇಳುವುದನ್ನ ನಿಲ್ಲಿಸಬೇಕು ಮತ್ತು ಗೌರವ ಮತ್ತು ಭಾವನೆಯೊಂದಿಗೆ ಒಟ್ಟಿಗೆ ಹಾಡಬೇಕು ಮತ್ತು ರಾಷ್ಟ್ರೀಯ ಹಬ್ಬಗಳು, ಸರ್ಕಾರಿ ಕಾರ್ಯಕ್ರಮಗಳು ಮತ್ತು ಸಾರ್ವಜನಿಕ ಸಭೆಗಳಲ್ಲಿ ಡಿಜೆ, ಮೊಬೈಲ್, ಬ್ಲೂಟೂತ್, ಸ್ಪೀಕರ್ ಇನ್ನಿತರ ಧ್ವನಿವರ್ಧಕಗಳ ಮೂಲಕ ರಾಷ್ಟ್ರಗೀತೆಯನ್ನು ನುಡಿಸುವುದನ್ನು ನಿಷೇಧಿಸಬೇಕು, ನಾಗರಿಕರು ಮತ್ತು ವಿದ್ಯಾರ್ಥಿಗಳು ಪ್ರತಿಯೊಂದು ಕಾರ್ಯಕ್ರಮದಲ್ಲಿ ರಾಷ್ಟ್ರಗೀತೆಯನ್ನು ಸಾಮೂಹಿಕವಾಗಿ ಹಾಕಬೇಕು ಎಂದು ಮನವಿ ಮಾಡಿದರು,

ಮನವಿ ಸ್ವೀಕರಿಸಿ ಮಾತನಾಡಿದ ತಾಲೂಕು ಗ್ರೇಡ್ 2 ತಹಸೀಲ್ದಾರ್ ಬಿ.ಆರ್. ಲೋಕೇಶ್ ರವರು ನಮ್ಮ ತಾಲೂಕು ಕಛೇರಿಗೆ ಯಾವುದೇ ಕಾರ್ಯಕ್ರಮದ ಅನುಮತಿ ಪಡೆಯಲು ಬಂದಾಗ ಇನ್ನು ಮುಂದೆ ರಾಷ್ಟ್ರಗೀತೆಯನ್ನು ಮೊಬೈಲ್ ಮತ್ತು ಡಿಜೆ ಸ್ಪೀಕರ್ ಧ್ವನಿವರ್ಧಕಗಳಲ್ಲಿ ಹಾಕುವುದನ್ನು ನಿಲ್ಲಿಸಬೇಕು ಹಾಗೆ ರಾಷ್ಟ್ರಗೀತೆಯನ್ನು ಸಾಮೂಹಿಕವಾಗಿ ಹಾಡಬೇಕು ಎಂದು ಕಟ್ಟುನಿಟ್ಟಾಗಿ ಮಾರ್ಗ ಸೂಚಿಯನ್ನು ನೀಡುತ್ತೇವೆ ಎಂದು ತಿಳಿಸಿದರು, ಇದೇ ಸಂದರ್ಭದಲ್ಲಿ ಕಾನೂನು ಸಲಹೆಗಾರ ವಕೀಲ ನಯಾಜ್ ಪಾಷಾ, ಮಂಡ್ಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಿಕ್ ಬೇಗ್, ಮಂಡ್ಯ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅಬ್ದುಲ್ ಮುತಲಿಪ್, ಕಾರ್ಯಾಧ್ಯಕ್ಷ ಅತಿಕ್, ಅಜಮ್ ಸೇರಿದಂತೆ ಇನ್ನು ಅನೇಕ ಪದಾಧಿಕಾರಿಗಳು ಇದ್ದರು, ಇದೇ ಸಂದರ್ಭದಲ್ಲಿ ಕಾನೂನು ಸಲಹೆಗಾರ ವಕೀಲ ನಯಾಜ್ ಪಾಷಾ, ಮಂಡ್ಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಿಕ್ ಬೇಗ್, ಮಂಡ್ಯ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅಬ್ದುಲ್ ಮುತಲಿಪ್, ಕಾರ್ಯಾಧ್ಯಕ್ಷ ಅತಿಕ್, ಅಜಮ್ ಸೇರಿದಂತೆ ಇನ್ನು ಅನೇಕ ಪದಾಧಿಕಾರಿಗಳು ಇದ್ದರು,


Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಇಬ್ಬರು ರೈತರ ಮೇಲೆ ಹುಲಿ ದಾಳಿ-ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರು



**ಹುಣಸೂರು:**ನಾಗರಹೊಳೆ-ಬಂಡೀಪುರ ಹುಲಿ ಸಂರಕ್ಷಿತ ವಲಯಕ್ಕೆ ಹೊಂದಿಕೊಂಡಿರುವ ಮೈಸೂರು ಜಿಲ್ಲೆಯಲ್ಲಿ ಹುಲಿ ಆತಂಕ ಮತ್ತೊಮ್ಮೆ ತಲೆಎತ್ತಿದೆ. ಸರಗೂರು, ಹೆಚ್.ಡಿ.ಕೋಟೆ ತಾಲ್ಲೂಕುಗಳ ನಂತರ ಈಗ ಹುಣಸೂರು ತಾಲ್ಲೂಕಿನ ಗೌಡನಕಟ್ಟೆ ಗ್ರಾಮದಲ್ಲಿ ಹುಲಿ ದಾಳಿ ನಡೆದಿದ್ದು, ಇಬ್ಬರು ರೈತರು ಕೂದಲೆಳೆಯಷ್ಟು ಅಂತರದಲ್ಲಿ ಸಾವಿನಿಂದ ಪಾರಾಗಿದ್ದಾರೆ.

ಗೌಡನಕಟ್ಟೆ ಗ್ರಾಮದ ಹೊಲದಲ್ಲಿ ಕೆಲಸ ಮಾಡುತ್ತಿದ್ದ ರೈತರಾದ ಪ್ರಕಾಶ್ (45) ಮತ್ತು ಸ್ವಾಮಿ (38) ಅವರ ಮೇಲೆ ಹುಲಿ ಆಕ್ರಮಣ ಮಾಡಿದೆ. ಇಬ್ಬರೂ ರಾಗಿ ಕಟಾವು ಕೆಲಸದಲ್ಲಿ ನಿರತರಿದ್ದ ವೇಳೆ ಹುಲಿ ಘರ್ಜಿಸುತ್ತಾ ಬಂದಿದೆ. ಹುಲಿಯನ್ನ ಕಂಡೊಡನೆ ಇಬ್ಬರೂ ಜೋರಾಗಿ ಕಿರುಚಿಕೊಂಡಿದ್ದಾರೆ. ಅಕ್ಕಪಕ್ಕದ ಹೊಲಗಳಲ್ಲಿದ್ದ ಇತರ ರೈತರು ಮತ್ತು ಕಾರ್ಮಿಕರು ಕೂಡಾ ಒಟ್ಟಿಗೆ ಕೂಗಾಡಿದ್ದರಿಂದ ಹುಲಿ ಆತಂಕಗೊಂಡು ತಕ್ಷಣವೇ ಹಿಂದೆ ಸರಿದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಈ ದಾಳಿ ನಡೆದ ಸ್ಥಳದಿಂದ ಸುಮಾರು 200 ಮೀಟರ್ ದೂರದಲ್ಲಿ ಹುಲಿಯ ಪಾದಚಿತ್ರಗಳು ಮತ್ತು ಎರಡು ಮರಿಗಳ ಗುರುತುಗಳು ಪತ್ತೆಯಾಗಿವೆ. ಹುಲಿ ತನ್ನ ಮರಿಗಳ ಜೊತೆಯಲ್ಲೇ ಈ ಪ್ರದೇಶದಲ್ಲಿ ವಿಹಾರ ಮಾಡುತ್ತಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ದೃಢಪಡಿಸಿದ್ದಾರೆ. ಈ ಕಾರಣದಿಂದಲೇ ಹುಲಿ ಮನುಷ್ಯರ ಮೇಲೆ ಆಕ್ರಮಣಕಾರಿ ವರ್ತನೆ ತೋರುತ್ತಿದೆ ಎಂಬ ಅಂದಾಜು ಇದೆ.

ಈ ಘಟನೆಯಿಂದ ಆತಂಕಗೊಂಡ ಗ್ರಾಮಸ್ಥರು ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆಯ ಉಪ ಸಂರಕ್ಷಣಾಧಿಕಾರಿ, ರೇಂಜ್ ಫಾರೆಸ್ಟ್ ಅಧಿಕಾರಿಗಳನ್ನು ಸುತ್ತುವರೆದು ಆಕ್ರೋಶ ವ್ಯಕ್ತಪಡಿಸಿದರು. ಹುಲಿ ಸೆರೆ ಹಿಡಿಯುವವರೆಗೂ ಇಲ್ಲಿಂದ ಎಲ್ಲಿ ಹೋಗುತ್ತೀರಿ ? ಎಂದು ರೈತರು ಪಟ್ಟು ಹಿಡಿದರು. ಮಹಿಳೆಯರು ಕೂಡಾ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

ಗ್ರಾಮಸ್ಥರ ಆಕ್ರೋಶಕ್ಕೆ ಮಣಿದ ಅಧಿಕಾರಿಗಳು ತಕ್ಷಣವೇ ಹುಲಿ ಸೆರೆ ಕಾರ್ಯಾಚರಣೆ ಆರಂಭಿಸಿದ್ದಾರೆ. ನಾಗರಹೊಳೆಯಿಂದ ಆಗಮಿಸಿದ ನಾಲ್ಕು ಆನೆಗಳು, ಡಾ. ವಾಸುದೇವ್ ಮೂರ್ತಿ ನೇತೃತ್ವದ ಖ್ಯಾತ ಹುಲಿ ಸೆರೆ ತಂಡ, ಕ್ಯೂಆರ್‌ಟಿ ತಂಡ, ಡ್ರೋನ್ ತಂಡ ಮತ್ತು 50ಕ್ಕೂ ಹೆಚ್ಚು ಸಿಬ್ಬಂದಿ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಗುರುವಾರ ಬೆಳಗ್ಗೆಯಿಂದ ಕೇಜ್ ಹಾಕುವ ಕಾರ್ಯ ಆರಂಭವಾಗಿದೆ. ಜತೆಗೆ ಗ್ರಾಮದ ಸುತ್ತಮುತ್ತ 10 ಕಡೆ ಟ್ರಾಪ್ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಗೌಡನಕಟ್ಟೆ, ಕೆರೆಹಳ್ಳಿ, ಹಿರೇಹಳ್ಳಿ, ಉದ್ದೂರು ಸುತ್ತಮುತ್ತಲಿನ ಗ್ರಾಮಗಳ ರೈತರು, ನಾವು ಭಯದ ವಾತಾವರಣದಲ್ಲಿ ಬದುಕುತ್ತಿದ್ದಾರೆ. ರಾತ್ರಿ ಹೊಲಕ್ಕೆ ಹೋಗಲು ಭಯ, ಬೆಳಗ್ಗೆ ಮಕ್ಕಳನ್ನು ಶಾಲೆಗೆ ಕಳುಹಿಸಲು ಹೆದರಿಕೆ ಎಂದು ಗ್ರಾಮಸ್ಥರು ಕಣ್ಣೀರಿಟ್ಟರು.

ಕಳೆದ ಎರಡು ತಿಂಗಳಿನಿಂದ ಮೈಸೂರು ಜಿಲ್ಲೆಯಲ್ಲಿ ಹುಲಿ ಆತಂಕ ನಿರಂತರವಾಗಿದೆ. ಸರಗೂರಿನಲ್ಲಿ ಒಬ್ಬ ವೃದ್ಧೆ, ಹೆಚ್.ಡಿ. ಕೋಟೆಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ. ಈಗ ಹುಣಸೂರಿನಲ್ಲಿ ಈ ಘಟನೆ ನಡೆದಿರುವುದು ಜನರಲ್ಲಿ ಆತಂಕ ಹೆಚ್ಚಿಸಿದೆ.

ಅರಣ್ಯ ಇಲಾಖೆಯು ಗ್ರಾಮಸ್ಥರಿಗೆ ಒಂಟಿಯಾಗಿ ಹೊಲಕ್ಕೆ ಹೋಗಬೇಡಿ, ಗುಂಪಾಗಿ ಹೋಗಿ, ಜೋರಾಗಿ ಮಾತಾಡುತ್ತಾ ಇರಿ, ರಾತ್ರಿ ಹೊಲಕ್ಕೆ ಹೋಗುವುದನ್ನ ತಪ್ಪಿಸಿ ಎಂದು ಸೂಚನೆ ನೀಡಿದೆ.

# ಬೀದಿ ಬದಿ ಕಿರುಕುಳದ ಬಗ್ಗೆ ಧ್ವನಿ ಎತ್ತಿದ ಐಶ್ವರ್ಯ ರೈ ಬಚ್ಚನ್



ನಟಿ ದೀಪಿಕಾ ಪಡುಕೋಣೆ ಇತ್ತೀಚಿನ ದಿನಗಳಲ್ಲಿ ನಿರಂತರವಾಗಿ ಸುದ್ದಿಯಲ್ಲಿದ್ದು, ಕೆಲವು ಮಹತ್ವದ ಸಿನಿಮಾಗಳಿಂದ ಹಿಂದೆ ಸರಿದಿರುವ ನಿರ್ಧಾರದಿಂದ ಹಿಡಿದು ಅವರ ಸ್ವಂತ ಸ್ಕಿನ್‌ಕೇರ್ ಬ್ರ್ಯಾಂಡ್ '82°E' ಕಂಪನಿಯ ಆರ್ಥಿಕ ಸ್ಥಿತಿಯವರೆಗೆ ಹಲವು ವಿಚಾರಗಳು ಚರ್ಚೆಗೆ ಕಾರಣವಾಗುತ್ತಿವೆ, ಏಕೆಂದರೆ 2024ರಲ್ಲಿ ಈ ಬ್ರ್ಯಾಂಡ್ 21.2 ಕೋಟಿ ರೂಪಾಯಿ ವ್ಯಾಪಾರ ಮಾಡಿದ್ದರೂ

ಈಗ ಅದು 14.7 ಕೋಟಿಗೆ ಇಳಿದಿರುವುದು ಗಮನಸೆಳೆಯುತ್ತಿದ್ದು, ಅದರ ಜೊತೆಗೆ 2024ರಲ್ಲಿ 23 ಕೋಟಿ ರೂಪಾಯಿ ನಷ್ಟ ಅನುಭವಿಸಿದ್ದರೂ ಈ ವರ್ಷ ನಷ್ಟವು 12.3 ಕೋಟಿಗೆ ತಗ್ಗಿರುವುದೂ ವರದಿಯಾಗಿದ್ದು, ಇದಕ್ಕೆ ಕಾರಣವಾಗಿ ಕಂಪನಿಯು 2024ರಲ್ಲಿ ಮಾಡಿದ್ದ 47 ಕೋಟಿ ರೂಪಾಯಿಯ ದೊಡ್ಡ ವೆಚ್ಚವನ್ನು 2025ರಲ್ಲಿ ಭಾರೀ ಮಟ್ಟದಲ್ಲಿ ಕತ್ತರಿಸಿ ಕೇವಲ 25 ಕೋಟಿಗೆ ಇಳಿಸಿದ್ದರಿಂದ ನಷ್ಟದಲ್ಲಿ ಭಾಗಶಃ ಕಡಿತ ಕಂಡುಬಂದಿದೆ ಎಂದು ಹೇಳಲಾಗುತ್ತಿದ್ದು.

ಕಳೆದ ವರ್ಷ ಬ್ರ್ಯಾಂಡ್‌ಗೆ ಮಾಡಿದ ಭಾರೀ ಪ್ರಮಾಣದ ಮಾರ್ಕೆಟಿಂಗ್ ಈ ಬಾರಿ ಗಣನೀಯವಾಗಿ ಕಡಿಮೆಯಾಗಿರುವುದು ಖರ್ಚು ತಗ್ಗುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎನ್ನಲಾಗುತ್ತಿದೆ,

ದೀಪಿಕಾ ಪಡುಕೋಣೆ ಅವರಿಗೆ ಸೋಶಿಯಲ್ ಮೀಡಿಯಾದಲ್ಲಿ ದೊಡ್ಡ ಅಭಿಮಾನಿ ಬಳಗವಿದ್ದು ಅದನ್ನು ಬಳಸಿ ಉತ್ಪನ್ನಗಳ ಪ್ರಚಾರ ಮಾಡಿದರೂ 82°E ಉತ್ಪನ್ನಗಳ ಬೆಲೆ ಹೆಚ್ಚಿನದು ಮತ್ತು ಮಾರುಕಟ್ಟೆಯಲ್ಲಿ ಇದ್ದುಬಂದಿರುವ ದೊಡ್ಡ ಮಟ್ಟದ ಸ್ಪರ್ಧೆ ಬ್ರ್ಯಾಂಡ್‌ನ್ನು ಸ್ಥಿರಗೊಳಿಸುವುದನ್ನು ಕಷ್ಟಕರವಾಗಿಸಿದೆ ಎಂದು ಉದ್ಯಮ ವಲಯ ವಿಶ್ಲೇಷಕರು ಹೇಳುತ್ತಿದ್ದರೆ.

ದೀಪಿಕಾ ಪಡುಕೋಣೆ ತಮ್ಮ ಕೆಲಸದ ಹೊರೆ ಕಡಿಮೆ ಮಾಡಿಕೊಳ್ಳುವುದಾಗಿ ಮತ್ತು ದಿನಕ್ಕೆ ಕೇವಲ 8 ಗಂಟೆ ಮಾತ್ರ ಕೆಲಸ ಮಾಡುವುದಾಗಿ ಹೇಳಿ 'ಸ್ಪಿರಿಟ್' ಸೇರಿದಂತೆ ಕೆಲವು ಪ್ರಾಜೆಕ್ಟ್‌ಗಳಿಂದ ಹಿಂದೆ ಸರಿದಿದ್ದು, ಅದೇ ರೀತಿ 'ಕಲ್ಕಿ 2898 ಎಡಿ' ಚಿತ್ರದ ಮುಂದುವರಿದ ಭಾಗದಲ್ಲೂ ಅವರು ಕಾಣಿಸಿಕೊಳ್ಳುವುದಿಲ್ಲ ಎಂಬ ಮಾಹಿತಿ ಹೊರಬಂದಿರುವುದು ಸಿನಿಮಾಗೆ ಹಿನ್ನಡೆಯಾಗಿ ಪರಿಣಮಿಸಿದೆ ಎಂಬ ವರದಿ ಹೊರಬಂದಿದೆ.

# ಗುಡಿಸಲಲ್ಲಿ ವಾಸಿಸುತ್ತಿದ್ದ ಬೈಕ್ ಟ್ಯಾಕ್ಸಿ ಚಾಲಕನ ಖಾತೆಯಲ್ಲಿ 331 ಕೋಟಿ ಪತ್ತೆ

**ಜೈಪುರ:** ಲಕ್ಕಿ ಬಾಸ್ಕರ್ ಸಿನಿಮಾ ನೋಡಿದ್ರೆ ಒಬ್ಬ ಸಾಧಾರಣ ಬ್ಯಾಂಕ್ ಉದ್ಯೋಗಿ 100 ಕೋಟಿ ರೂ. ಹಣ ಗಳಿಸೋದು ಅಚ್ಚರಿ ತರಿಸುತ್ತೆ. ಆದ್ರೆ ರಿಯಲ್ ಲೈಫ್‌ನಲ್ಲಿ ಆ ರೀತಿಯ ಘಟನೆಗಳು ತೀರ ಅಪರೂಪ. ಇದೀಗ ಅಂತಹದ್ದೇ ಘಟನೆಯೊಂದು ಉದಯಪುರದಲ್ಲಿ ನಡೆದಿದೆ. 2 ಕೋಣೆಯ ಗುಡಿಸಲಿನಲ್ಲಿ ವಾಸಿಸುತ್ತಿದ್ದ ರ್‍ಯಾಪಿಡೋ ಚಾಲಕನ ಬ್ಯಾಂಕ್ ಖಾತೆಯಲ್ಲಿ ನಡೆದ ವಹಿವಾಟು ಹಾಗೂ ಖರ್ಚು ವೆಚ್ಚ ನೋಡಿ ಇಡಿ ಅಧಿಕಾರಿಗಳೇ ದಂಗಾಗಿದ್ದಾರೆ. ಏಕೆಂದ್ರೆ, ರ್‍ಯಾಪಿಡೋ ಚಾಲಕನಿಗೆ ಸಂಪರ್ಕವೇ ಇಲ್ಲದ, ಆತ್ಮೀಯರೂ ಅಲ್ಲ, ಗೆಳೆಯ, ಕುಟುಂಬಸ್ಥರು ಅಲ್ಲದ ಜೋಡಿಗಳ ಮದುವೆಗೆ 1 ಕೋಟಿ ರೂಪಾಯಿ ಖರ್ಚು ಮಾಡಿದ್ದಾನೆ.

ಕೇವಲ 8 ತಿಂಗಳಲ್ಲಿ 331.36 ಕೋಟಿ ರೂಪಾಯಿ ವಹಿವಾಟು ನಡೆಸಿದ್ದಾನೆ. ಆಗಸ್ಟ್ 19, 2024 ರಿಂದ ಏಪ್ರಿಲ್ 16, 2025ರ ನಡುವೆ ವಹಿವಾಟು ನಡೆದಿದೆ. ಇದೀಗ ರ್‍ಯಾಪಿಡೋ ಚಾಲಕ ಅರೆಸ್ಟ್ ಆಗಿದ್ದಾನೆ. ಇಷ್ಟೇ ಅಲ್ಲ ಈತನ ರೋಚಕ ಕತೆಗಳು ಹೊರಬಂದಿದೆ. ಹೌದು. 1xBet ಆನ್‌ಲೈನ್ ಬೆಟ್ಟಿಂಗ್ ನೆಟ್‌ವರ್ಕ್ ಅಕ್ರಮ ಬೆಟ್ಟಿಂಗ್ ಹಾಗೂ ಅಕ್ರಮ ಹಣ ವರ್ಗಾವಣೆಗೆ ಸಂಬಂಧಿಸಿದ ತನಿಖೆ ನಡೆಸುತ್ತಿದ್ದ ವೇಳೆ ಇಡಿ ಅಧಿಕಾರಿಗಳ ತಂಡ ಬೈಕ್ ಟ್ಯಾಕ್ಸಿ ಚಾಲಕನ ಬ್ಯಾಂಕ್ ಖಾತೆಯಲ್ಲಿ ಬರೋಬ್ಬರಿ 331.36 ಕೋಟಿ ರೂ. ವಹಿವಾಟು ನಡೆದಿರುವುದನ್ನು ಪತ್ತೆಹಚ್ಚಿದೆ. ದಿನಕ್ಕೆ 500-600 ರೂ. ಸಂಪಾದಿಸಿಕೊಂಡು ಗುಡಿಸಲಲ್ಲಿ ವಾಸ ಮಾಡಿಕೊಂಡಿದ್ದ ಚಾಲಕ ಇಷ್ಟು ಕೋಟಿ ವಹಿವಾಟು ನಡೆಸಿದ್ದು ಕಂಡು ಜಾರಿ ನಿರ್ದೇಶನಾಲಯದ ಅಧಿಕಾರಿಗಳೇ ದಂಗಾಗಿದ್ದಾರೆ.

ಫೈವ್‌ಸ್ಟಾರ್ ಹೋಟೆಲ್‌ನಲ್ಲಿ ಮದ್ವೆ

ಇತ್ತೀಚೆಗೆ ಗುಜರಾತ್‌ನ ಯುವ ರಾಜಕೀಯ ನಾಯಕ ಅದಿತ್ಯ ಝುಲಾ ಮದುವೆ ಉದಯಪುರದ ತಾಜ್ ಅರಾವಳಿ ರೆಸಾರ್ಟ್‌ನಲ್ಲಿ ನಡೆದಿತ್ತು. ಈ ಮದುವೆಗೆ ಇದೇ ರ್‍ಯಾಪಿಡೋ ಚಾಲಕ 1 ಕೋಟಿ ರೂಪಾಯಿ ಖರ್ಚು ಮಾಡಿದ್ದಾನೆ. ಆದಿತ್ಯ ಝುಲಾಗೂ ಈ ಉಬರ್ ಚಾಲಕನಿಗೂ ಯಾವುದೇ ಸಂಪರ್ಕವಿಲ್ಲ. ಆದಿತ್ಯ ಝುಲಾಗೆ ಒಂದೇ ಒಂದು ಬಾರಿ ಫೋನ್ ಮಾಡಿಲ್ಲ. ಆದ್ರೆ ಮದ್ವೆಯ ಹಲವು ಬಿಲ್‌ಗಳನ್ನ ಪಾವಯಿ ಮಾಡಿದ್ದಾನೆ ಚಾಲಕ, ಇದರ ಖರ್ಚು ವೆಚ್ಚ ಒಟ್ಟು 1 ಕೋಟಿ ರೂ.ಗಳಷ್ಟಾಗಿದೆ ಎಂದು ಇ.ಡಿ ತನಿಖಾ ಮೂಲ ಹೇಳಿವೆ. ರ್‍ಯಾಪಿಡೋ ಚಾಲಕ ಬೇರೆ ಖಾತೆಗಳಿಗೆ ಹಣ ವರ್ಗಾಯಿಸುವ ಹಾಗೂ ಈತನ ಖಾತೆಗೆ ಹಣ ಜಮೆ ಮಾಡುವ ಎಲ್ಲಾ ಖಾತೆಗಳು ಅಪರಿಚಿತ. ಒಂದಕ್ಕೊಂದು ಸಂಬಂಧವೇ ಇಲ್ಲ. ಇದೇ ಕಾರಣದಿಂದ ಇಡಿ ಅಧಿಕಾರಿಗಳು ಅಚ್ಚರಿಗೊಂಡಿದ್ದಾರೆ.

ಎಲ್ಲಾ ಟ್ರಾನ್ಸಾಕ್ಷನ್ ಪರಿಶೀಲನೆ ಮಾಡಿದ ಇಡಿ ಅಧಿಕಾರಿಗಳಿಗೆ ಒಂದು ಖಾತೆ ಬೆಟ್ಟಿಂಗ್ ಖಾತೆಗೆ ಲಿಂಕ್ ಆಗಿರುವುದು ಪತ್ತೆಯಾಗಿದೆ. ಹೀಗಾಗಿ ತನಿಖೆ ಮುಂದುವರಿಸಿದ ಇಡಿ ಅಧಿಕಾರಿಗಳಿಗೆ ಈ ರ್‍ಯಾಪಿಡೋ ಚಾಲಕ ಬೆಟ್ಟಿಂಗ್‌ನಲ್ಲೂ ಸಕ್ರಿಯವಾಗಿದ್ದ ಅನ್ನೋದು ಗೊತ್ತಾಗಿದೆ. ಆದ್ರೆ ಈತನ ಫೋನ್ ಹಾಗೂ ಸೋಷಿಯಲ್ ಮೀಡಿಯಾಗಳಲ್ಲಿ ಬೆಟ್ಟಿಂಗ್‌ಗೆ ಸಂಬಂಧಿಸಿದ ಯಾವುದೇ ಮಾಹಿತಿ ಸಿಕ್ಕಿಲ್ಲ ಅನ್ನೋದು ಅಧಿಕಾರಿಗಳ ಚಕಿತಕ್ಕೆ ಕಾರಣವಾಗಿದೆ.

ತನಿಖೆ ತೀವ್ರಗೊಳ್ಳುತ್ತಿದ್ದಂತ ಹಲವು ಅನಾಮಿಕ ಖಾತೆಗಳು, ಗೊತ್ತಿಲ್ಲದ ವ್ಯವಹಾರಗಳು ಬಯಲಾಗುತ್ತಿದೆ. ಹೀಗಾಗಿ ಈತನ ವ್ಯವಹಾರವೇನು? ಹಣದ ಮೂಲದ ಕುರಿತು ತೀವ್ರ ತನಿಖೆ ಮುಂದುವರಿದಿದೆ.

ತನಿಖೆಯ ಭಾಗವಾಗಿ ಏಜೆನ್ಸಿಯು ಇತ್ತೀಚೆಗೆ ಮಾಜಿ ಕ್ರಿಕೆಟಿಗ ಶಿಖರ್ ಧವನ್ ಮತ್ತು ಸುರೇಶ್ ರೈನಾ ಅವರ ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿತ್ತು, ಜೊತೆಗೆ ಇತರ ಹಲವಾರು ಕ್ರಿಕೆಟಿಗರು ಮತ್ತು ಸೆಲೆಬ್ರಿಟಿಗಳನ್ನು ಪ್ರಶ್ನಿಸಿತ್ತು.

# ಇಬ್ಬರೂ ಒಟ್ಟಿಗೆ ಸಾಗುವುದೇ ನಮ್ಮ ನಡುವೆ ಆಗಿರುವ ಒಪ್ಪಂದ



**ಬೆಂಗಳೂರು:** ಪಕ್ಷದ ವರಿಷ್ಠರ ತೀರ್ಮಾನ, ಸೂಚನೆಯಂತೆ ನಾನು ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡೆದುಕೊಳ್ಳುತ್ತೇವೆ ಎಂದು ನಾನು ಹಾಗೂ ಅವರು ತೀರ್ಮಾನಿಸಿದ್ದೇವೆ. ಸಚಿವರಾಗಲಿ, ಶಾಸಕರಾಗಿ ಸರ್ಕಾರದ ವಿರುದ್ಧವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು ತಮ್ಮ ನಿವಾಸದಲ್ಲಿ ಡಿ.ಕೆ ಶಿವಕುಮಾರ್ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ನಾವಿಬ್ಬರೂ ಪಕ್ಷದ ವರಿಷ್ಠರು ಸೂಚಿಸಿದಂತೆ ನಡೆದುಕೊಳ್ಳುತ್ತೇವೆ ಎಂದು ತೀರ್ಮಾನಿಸಿದ್ದೇವೆ. ಅಧಿವೇಶನ ಇರುವುದರಿಂದ ಇಬ್ಬರಿಗೂ ಗೊಂದಲಗಳನ್ನು ತಿಳಿಗೊಳಿಸುವ ಕೆಲಸ ಮಾಡಲು ಸೂಚಿಸಿದ್ದಾರೆ. ನಾಳೆಯಿಂದ ಯಾವುದೇ ಗೊಂದಲ ಇರುವುದಿಲ್ಲ. ಈಗಲೂ ಇಲ್ಲ

ನಮ್ಮ ನಡುವೆ ಆಗಿರುವ ಒಪ್ಪಂದದ ಬಗ್ಗೆ ಹೈ ಕಮಾಂಡಿಗೆ ಮಾಹಿತಿ ನೀಡಲಾಗುವುದು. ಗೊಂದಲ ಸೃಷ್ಟಿಯಾಗಿದೆ, ಕೆಲವು ಮಾಧ್ಯಮಗಳು ಇದನ್ನು ಸೃಷ್ಟಿಸಿವೆ ಎಂದರು. ಕೆಲವು ಶಾಸಕರು ಸಚಿವ ಸಂಪುಟ ಪುನರ್ ರಚನೆಗೆ ಸಂಬಂಧಿಸಿದಂತೆ ದೆಹಲಿಗೆ ಭೇಟಿ ನೀಡಿರಬಹುದು. ಹಾಗೆಂದು ಬೇರೆ ಅರ್ಥ ಕಲ್ಪಿಸಬೇಕಿಲ್ಲ. ಕೆಲವರು ಇಂಥ ಕಾರಣಕ್ಕೆ ಭೇಟಿ ನೀಡಿರುವುದಾಗಿ ತಿಳಿಸಿದ್ದಾರೆ ಎಂದರು.

ಬ್ರೇಕ್‌ಫಾಸ್ಟ್ ಮೀಟಿಂಗ್‌ನಲ್ಲಿ ಡಿ.ಕೆ. ಶಿವಕುಮಾರ್, ಹಾಗೂ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಪೊನ್ನಣ್ಣ ಉಪಸ್ಥಿತರಿದ್ದರು. ಉಪಹಾರ ಸಭೆಯಲ್ಲಿ ಏನೂ ಮಾತನಾಡಿಲ್ಲ. ಇಬ್ಬರೂ ನಮ್ಮ ಮನೆಯಲ್ಲಿ ಒಟ್ಟಿಗೆ ಉಪಹಾರ ಸೇವಿಸಿದ್ದೇವೆ. ಪಕ್ಷದ ವರಿಷ್ಠರಾದ ವೇಣುಗೋಪಾಲ್ ಅವರು ಪೊನ್ನಣ್ಣ ಅವರಿಗೆ ಕರೆ ಮಾಡಿ ಶಿವಕುಮಾರ್ ಅವರನ್ನು ಉಪಾಹಾರಕ್ಕೆ ಕರೆಯಲು ಸೂಚಿಸಿದ್ದರು. ಡಿಸಿಎಂ ಅವರಿಗೂ ಇದನ್ನೇ ತಿಳಿಸಿದ್ದರು. ಅವರೇ, ನಮ್ಮ ಮನೆಗೆ ಊಟಕ್ಕೆ ಬನ್ನಿ ಎಂದು ಆಹ್ವಾನತ್ತಿದ್ದರು. ಮತ್ತೊಂದು ದಿನ ಊಟಕ್ಕೆ ಬರೋಣ ಎಂದು ತಿಳಿಸಿ ನಮ್ಮ ಮನೆಗೇ ಉಪಾಹಾರಕ್ಕೆ ಕರೆದೆ ಎಂದರು.

**2028 ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ತರಲು ಕಾರ್ಯತಂತ್ರ**

ಇತ್ತೀಚಿನ ದಿನಗಳಲ್ಲಿ ಅನಗತ್ಯವಾಗಿ ಕೆಲವು ಗೊಂದಲಗಳು ನಿರ್ಮಾಣವಾಗಿವೆ. ನಾವು ಈ ಬಗ್ಗೆ ಮಾತನಾಡಿದ್ದೇವೆ. 2028ರ ಚುನಾವಣೆ ಹಾಗೂ ಸ್ಥಳೀಯ ಸಂಸ್ಥೆಗಳ ಕಾರ್ಪೋರೇಷನ್, ತಾಲೂಕು, ಜಿಲ್ಲಾ ಹಾಗೂ ಗ್ರಾಮ ಪಂಚಾಯತ್ ಚುನಾವಣೆಗಳು ಬಹಳ ಮುಖ್ಯವಾಗಿದ್ದು , ಈ ಬಗ್ಗೆ ಚರ್ಚೆ ಮಾಡಿದ್ದೇವೆ. 2028 ರಲ್ಲಿ ಕಾಂಗ್ರೆಸ್‌ನ್ನು ಮತ್ತೆ ಅಧಿಕಾರಕ್ಕೆ ತರಬೇಕೆಂದು ಚರ್ಚಿಸಲಾಗಿದೆ. 2022ರ ವಿಧಾನ ಸಭಾ ಚುನಾವಣೆಯಲ್ಲಿ ಕೆಲಸ ಮಾಡಿದಂತೆಯೇ ಮುಂದೆಯೂ ಒಟ್ಟಿಗೆ ಸಾಗುವ ತೀರ್ಮಾನ ಮಾಡಿದ್ದೇವೆ ಎಂದರು. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ. ಈಗಲೂ ಇಲ್ಲ, ಮುಂದೆಯೂ ಇರುವುದಿಲ್ಲ. ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ಡಿಸೆಂಬರ್ 8 ರಿಂದ ಪ್ರಾರಂಭವಾಗಲಿದೆ. ನಾವು ವಿರೋಧ ಪಕ್ಷದವರನ್ನು ಸಮರ್ಥವಾಗಿ ಇವರಿಗೆ ಎದುರಿಸಿದ್ದೇವೆ ಮುಂದೆಯೂ ಎದುರಿಸುತ್ತೇವೆ. ಬಿಜೆಪಿ, ಜೆಡಿಎಸ್ ಅಪಪ್ರಚಾರ, ಸುಳ್ಳು ಆರೋಪಗಳನ್ನು, ಅಪವಾದಗಳನ್ನು ಮಾಡುವುದು ಬಿಜೆಪಿ ಹಾಗೂ ಜೆಡಿಎಸ್ ಅವರ ಚಾಳಿ. ಇವರಿಬ್ಬರನ್ನೂ ಸಮರ್ಥವಾಗಿ ನಾನು ಮತ್ತು ಉಪಮುಖ್ಯಮಂತ್ರಿಗಳು ಎದುರಿಸುತ್ತೇವೆ. ಅದಕ್ಕೆ ಅಗತ್ಯವಿರುವ ಕಾರ್ಯತಂತ್ರಗಳನ್ನು ರೂಪಿಸಿಕೊಂಡಿದ್ದೇವೆ ಎಂದರು. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ. ಈಗಲೂ ಇಲ್ಲ, ಮುಂದೆಯೂ ಇರುವುದಿಲ್ಲ. ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ಡಿಸೆಂಬರ್ 8 ರಿಂದ ಪ್ರಾರಂಭವಾಗಲಿದೆ. ನಾವು ವಿರೋಧ ಪಕ್ಷದವರನ್ನು ಸಮರ್ಥವಾಗಿ ಇವರಿಗೆ ಎದುರಿಸಿದ್ದೇವೆ ಮುಂದೆಯೂ ಎದುರಿಸುತ್ತೇವೆ. ಬಿಜೆಪಿ, ಜೆಡಿಎಸ್ ಅಪಪ್ರಚಾರ, ಸುಳ್ಳು ಆರೋಪಗಳನ್ನು, ಅಪವಾದಗಳನ್ನು ಮಾಡುವುದು ಬಿಜೆಪಿ ಹಾಗೂ ಜೆಡಿಎಸ್ ಅವರ ಚಾಳಿ. ಇವರಿಬ್ಬರನ್ನೂ ಸಮರ್ಥವಾಗಿ ನಾನು ಮತ್ತು ಉಪಮುಖ್ಯಮಂತ್ರಿಗಳು ಎದುರಿಸುತ್ತೇವೆ. ಅದಕ್ಕೆ ಅಗತ್ಯವಿರುವ ಕಾರ್ಯತಂತ್ರಗಳನ್ನು ರೂಪಿಸಿಕೊಂಡಿದ್ದೇವೆ ಎಂದರು.

# ರೈತರ ನೇತೃತ್ವದ ಬೃಹತ್ ಹೋರಾಟಕ್ಕೆ ಬೆಂಬಲ: ಶಾಸಕ ಧೀರಜ್ ಮುನಿರಾಜು



ದೊಡ್ಡಬಳ್ಳಾಪುರದಲ್ಲಿ ಸುದ್ದಿಗೋಷ್ಠಿ ಬಳಿಕ ಮಾತನಾಡಿದ ಶಾಸಕರಾದ ಧೀರಜ್ ಮುನಿರಾಜು ನೀರಾವರಿ, ಬೆಳೆಪರಿಹಾರ, ಹಾಲಿನ ಪ್ರೋತ್ಸಾಹ ಧನ ವಿಚಾರವಾಗಿ ಜಿಲ್ಲಾಧಿಕಾರಿ ಕಚೇರಿ ಎದುರು ರೈತರ ಸಮ್ಮುಖದಲ್ಲಿ ಭಾರತೀಯ ಜನತಾ ಪಾರ್ಟಿ ಬೃಹತ್ ಹೋರಾಟ ಮಾಡುತ್ತೇವೆ. ಎಂದರು.

ದೊಡ್ಡಬೆಳವಂಗಲ, ಸಾಸಲು ಹೋಬಳಿಯಲ್ಲಿ ಕಸದ ಸಮಸ್ಯೆ ಮಿತಿಮೀರಿ ಹೋಗಿದೆ. ಮುಂದಿನ ದಿನಗಲ್ಲಿ ಈ ವಿಚಾರವಾಗಿ ರೈತರ ನೇತೃತ್ವದಲ್ಲಿ ಕಾನೂನು ಹೋರಾಟ ಮಾಡುತ್ತೇವೆ. ಕಳೆದ ಸದನದಲ್ಲಿ ನಾನು ಸಚಿವರಾದ ಡಾ. ಜಿ. ಪರಮೇಶ್ವರ್ ಬಳಿ ಮನವಿ ಮಾಡಿದ್ದೇನೆ. ಎಂ. ಎಸ್.ಜಿ.ಪಿ ಕಸ ವಿಲೇವಾರಿ ಘಟಕ 2014ರಿಂದ ಕೆಲಸ ಮಾಡ್ತಿದೆ.

ಒಂದು ಕಿಲೋಮೀಟರ್ ದೂರದಲ್ಲಿ ಎತ್ತಿನ ಹೊಳೆ ಡ್ಯಾಮ್ ಕಟ್ಟುತ್ತಿದ್ದಾರೆ. ಆ ಡ್ಯಾಮ್ ನೀರಿಗೆ ಕೊಳಚೆ ನೀರು ಸೇರುತ್ತೆ. ಇದರಿಂದ ಅನಾರೋಗ್ಯ ಸಮಸ್ಯೆ ಹೆಚ್ಚಾಗುತ್ತೆ ಎಂದು ಹೇಳಿದ್ದೇನೆ.

ಆದರೂ ಅವರು ಮಾಡೇ ಮಾಡ್ತೀನಿ ಅಂತ ಹೊರಟಿದ್ದಾರೆ ಎಂದು ಆಕ್ರೋಶ ಹೊರ ಹಾಕಿದ್ರು. ಇನ್ನೂ KIDB ಭೂ ಸ್ವಾಧೀನ ಕುರಿತು ಮಾತನಾಡಿದ ಅವರು ಪಾಸ್ಕಾನ್, ಕ್ವಿನ್ ಸಿಟಿ ಅಂತ ಸಾವಿರರು ಎಕರೆ ಜಮೀನು ಸ್ವಾಧೀನ ಪಡಿಸಿಕೊಳ್ಳಿತ್ತಿದ್ದಾರೆ. ಹುಲಿಕುಂಟೆ ಬಳಿ ಕ್ವಿನ್ ಸಿಟಿಗಾಗಿ 5000 ಎಕರೆ ಜಮೀನನ್ನ ಸ್ವಾಧೀನ ಪಡಿಸಿಕೊಂಡಿದ್ದಾರೆ. ಮೂರು ಮೂರುವರೆ ಸಾವಿರ ದೊಡ್ಡಬಳ್ಳಾಪುರ ಹಾಗೂ ಒಂದು ಒಂದೂವರೆ ಸಾವಿರ ನೆಲಮಂಗಲ ತಾಲೂಕಿಗೆ ಸೇರಿದ್ದು. ಅಲ್ಲಿ ಯಾವುದೇ ರೀತಿಯ ಪ್ಲಾನಿಂಗ್

ಇಲ್ಲದೆ KIDB ಭೂ ಸ್ವಾಧೀನ ಪಡಿಸಿಕೊಂಡಿದೆ. ಕೆಐಡಿಬಿ ವಿರುದ್ಧವಾಗಿ ಪ್ರತಿ ಸದನದಲ್ಲಿ ಪ್ರಶ್ನೆ ಮಾಡುತ್ತಾ ಬಂದಿದ್ದೇನೆ. ಖಂಡಿತವಾಗಿ ಇದು ಕಡೆ ಅವಕಾಶ ನೀಡ್ತೀದ್ದೇವೆ. ಇನ್ನ ನಮ್ಮ ತಾಲೂಕಿನಲ್ಲಿ ಒಂದು ಇಂಚು ಭೂ ಸ್ವಾಧೀನ ಮಾಡಲು ಬಿಡಲ್ಲ. ಇನ್ನೊಂದು ಫ್ಯಾಕ್ಟರಿ ಅವಶ್ಯಕತೆ ಇಲ್ಲ. ನಮ್ಮ ಜನಕ್ಕೆ ಇಷ್ಟೇ ಕೆಲಸಗಳು ಸಾಕು. ಇನ್ನ ಹೆಚ್ಚಿನ ಕಾರ್ಖಾನೆಗಳು ಬೆಡ, ಭೂ ಸ್ವಾಧೀನ ಪಡಿಸಿಕೊಳ್ಳೋದೂ ಬೇಡ. ಸೇಷನ್ ನಲ್ಲಿ ಎದ್ದು ನಿಂತು ಹೇಳಿದ್ದೆ. ಸರ್ ದಯವಿಟ್ಟು ಇನ್ಮುಂದಕ್ಕೆ ನಮಗೆ ಬೇಡ. ಮುಂದೆ ಹೋಗಿ ಸಿರಾ ಕಡೆ ಹೋಗಿ, ಮಾಲೂರು ಕಡೆ ಹೋಗಿ ಬರಡು ಭೂಮಿ ಇರುವ ಕಡೆ ಹೋಗ್ರಿ. ಫಲವತ್ತಾದ ಭೂ ಸ್ವಾಧೀನ ಪಡಿಸಿಕೊಂಡು ರೈತರ ಜೀವನ ಹಾಳು ಮಾಡಬೇಡಿ ಎಂದು KIDB ಗೆ ಈ ಮೊದಲೇ ಆಗ್ರಹ ಮಾಡಿದ್ದೇನೆ. ಈ ಬಾರಿ ಸದನದ್ಲಲೂ ತಿಳಿಸುವಂತ ಕೆಲಸ ಮಾಡ್ತೀನಿ ಎಂದರು.

# ರೈತರ ಹಿತ ತೊರೆದು ಸಿಎಂ ಕುರ್ಚಿಗೆ ಮ್ಯೂಸಿಕಲ್ ಚೇರ್ ಆಟ: ಶಾಸಕ ಧೀರಜ್ ಮುನಿರಾಜು ಆರೋಪ




ರಾಜ್ಯ ಕಾಂಗ್ರೆಸ್ ಸರ್ಕಾರ ರೈತರ ಪರ ಕೆಲಸ ಮಾಡದೇ ಕುರ್ಚಿ ಉಳಿಸಿಕೊಳ್ಳಲು ನಿರತವಾಗಿದೆ ಎಂದು ಯಲಹಂಕ ಶಾಸಕ ಎಸ್ ಆರ್ ವಿಶ್ವನಾಥ್ ಕಿಡಿಕಾರಿದರು.

ದೊಡ್ಡಬಳ್ಳಾಪುರ ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ತಮ್ಮ ಪ್ರಣಾಳಿಕೆಯಲ್ಲಿ ರೈತರ ಪರ ಕೆಲಸ ಮಾಡುತ್ತೇವೆ ಎಂದು ಹೇಳಿದ್ದರು, ರೈತರ ವೋಟ್ ಪಡೆದು ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಆಯ್ತು, ಆದರೆ, ಇದೂವರೆಗೂ ರೈತರ ಪರ ಯಾವೊಂದು ಯೋಜನೆ ಜಾರಿಗೆ ತಂದಿಲ್ಲ ಎಂದರು.

ರೈತರಿಗೆ ಶೂನ್ಯ ಬಡ್ಡಿದರದಲ್ಲಿ ಲೋನ್ ಕೊಡುತ್ತೇವೆ ಎಂದು ಹೇಳಿದ್ದರು. ರಾಜ್ಯದಲ್ಲಿ ಅತಿವೃಷ್ಟಿ ಅನಾವೃಷ್ಟಿಯಿಂದ ರೈತರು ಸಾಕಷ್ಟು ನಷ್ಟ ಅನುಭವಿಸಿದ್ದಾರೆ. ಕೃಷಿ ಆಧಾರಿತ ಕರ್ನಾಟಕದಲ್ಲಿ ಸಬ್ಸಿಡಿ ದರದಲ್ಲಿ ದರದಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಸಿಗುತ್ತಿಲ್ಲ. ಎಸ್ ಸಿ, ಎಸ್ ಟಿ ಜನರಿಗೆ ಉಚಿತವಾಗಿ ಯಾವ ಸೌಲಭ್ಯಗಳನ್ನು ನೀಡುತ್ತಿಲ್ಲ. ಎಸ್ ಸಿ, ಎಸ್ ಟಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ವಿನಿಯೋಗ ಮಾಡಲಾಗುತ್ತಿದೆ...ಕೈಗಾರಿಕೆ ಸ್ಥಾಪನೆಗೆ ಸಾವಿರಾರು ಎಕರೆ ಭೂಸ್ವಾಧೀನ ಮಾಡಿಕೊಳ್ಳಲಾಗುತ್ತಿದೆ. ಇದೂವರೆಗೂ ಸೂಕ್ತ ಪರಿಹಾರ ನಿಗದಿ ಮಾಡದೇ ಮೀನಾಮೇಷ ಎಣಿಸುತ್ತದೆ. ಸರ್ಕಾರ ಹಾಗೂ ಅಧಿಕಾರಿಗಳು ದಲ್ಲಾಳಿ ಕೆಲಸ ಮಾಡುತ್ತಿದೆ...

ಪ್ರಕೃತಿ ವಿಕೋಪದಿಂದ ರೈತರು ಕಂಗಾಲಾಗಿದ್ದಾರೆ. ಬೆಳೆ ಹಾನಿ, ಮನೆ ಹಾನಿ ಸೇರಿದಂತೆ ಇತರೆ ಹಾನಿಗಳ ಪರಿಶೀಲನೆ ಕೃಷಿ ಸಚಿವ, ತೋಟಗಾರಿಕೆ ಸಚಿವರು ತೆರಳಿಲ್ಲ. ಸಚಿವರು ಕೂಡಲೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು.

30 ಸಾವಿರ ಕೋಟಿ ಹಣವನ್ನು ನೀರಾವರಿ ಯೋಜನೆಗೆ ಮೀಸಲು ಇಟ್ಟಿದ್ದೇವೆ ಎಂದಿದ್ದರು. ಆದರೆ ಹಣ ಎಲ್ಲಿ ಹೋಯ್ತು...ಕೃಷ್ಣ ಮೇಲ್ದಂಡೆ, ಕಳಸಬಂಡೂರಿ, ಮೇಕೆದಾಟು, ಎತ್ತಿನಹೊಳೆ ಯೋಜನೆ ಸೇರಿದಂತೆ ಇತರೆ ಯೋಜನೆಗಳು ಹಳ್ಳ ಹಿಡಿದಿವೆ..

ರಾಜ್ಯದ ಹಿತಾಸಕ್ತಿ ಮರೆತು ಕುರ್ಚಿ ಉಳಿಸಿಕೊಳ್ಳಲು ಸರ್ಕಾರ ಸರ್ಕಸ್ ಮಾಡುತ್ತಿದೆ. ಪ್ರಕೃತಿ ವಿಕೋಪದ ಪರಿಹಾರಕ್ಕಾಗಿ 10 ಕೋಟಿ ಟೆಂಡರ್ ಮಾಡಿತ್ತು, ಆದರೆ ಹಣ ಬಿಡುಗಡೆ ಮಾಡಿಲ್ಲ.

ಮಾಡಿಲ್ಲ. ಎಲ್ಲವನ್ನು ಕೇಂದ್ರದ ಕಡೆ ಬೊಟ್ಟು ಮಾಡಿ ಕುಳಿತಿದೆ. ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಸಿ ಎರಡು ಮೂರು ವರ್ಷವಾದರೂ ವಿದ್ಯುತ್, ಪಂಪ್, ಮೋಟರ್, ಪೈಪ್ ಸೇರಿದಂತೆ ಯಾವ ಸೌಲಭ್ಯ ನೀಡಿಲ್ಲ. ಇದರಿಂದ ರೈತ ಕಂಗಾಲಾಗಿದ್ದಾರೆ. ಕಬ್ಬಿನ ಬೆಳೆಗಾರರು ಇನ್ನೂ ಹೋರಾಟ ಮಾಡುತ್ತಿದ್ದಾರೆ. ಭೂ ಸ್ವಾಧೀನ ಪರಿಹಾರ ಹಣಕ್ಕಾಗಿ ದಲ್ಲಾಳಿಗಳಿಗೆ ಹಣ ನೀಡಬೇಕು. ಅಧಿಕಾರಿಗಳೇ ದಲ್ಲಾಳಿಗಳಾಗುತ್ತಿದ್ದಾರೆ.

ಎತ್ತಿನಹೊಳೆ ಯೋಜನೆ ಇನ್ನೂ ಜಾರಿಯಾಗಿಲ್ಲ. 20 ಸಾವಿರ ಕೋಟಿ ಖರ್ಚು ಮಾಡಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ನಿಶ್ಯಬ್ಧವಾಗಿದ್ದಾರೆ. ಖುರ್ಚಿ ಉಳಿಸಿಕೊಳ್ಳಲು ಪರದಾಡುತ್ತಿದ್ದಾರೆ. ಹೋರಾಟ ಮಾಡುವವರ ವಿರುದ್ಧ ಕ್ರಿಮಿನಲ್ ಕೇಸ್ ಹಾಕುತ್ತಾರೆ. ರೈತರ ವೋಟ್ ಬೇಕು, ರೈತರ ಹಿತ ಕಾಯಲು ಸರ್ಕಾರ ಸಂಪೂರ್ಣ ವಿಫಲವಾಗಿದೆ. ರೈತರನ್ನು ದಬ್ಬಾಳಕೆ ಮಾಡುತ್ತಿರಯವ ಸರ್ಕಾರ ವಿರುದ್ಧ ಹೋರಾಟ ಮಾಡಬೇಕಾಗಿದೆ ಎಂದರು...

ಶಾಸಕ ಧೀರಜ್ ಮುನಿರಾಜ್ ಮಾತನಾಡಿ, ಕೇಂದ್ರ ಸರ್ಕಾರ ಕಿಸಾನ್ ಸಮ್ಮಾನ್ ಯೋಜನೆಯಡಿಯಲ್ಲಿ ರಾಜ್ಯದ 51 ಲಕ್ಷ ರೈತರಿಗೆ ಪ್ರತಿ ಕಂತಲ್ಲಿ 3.7 ಲಕ್ಷ ಕೋಟಿ ಹಣ ಬಿಡುಗಡೆ ಮಾಡಿದೆ. ಮೂರು ಲಕ್ಷ ಇದ್ದ ಕಿಸಾನ್ ಕ್ರೆಡಿಟ್ ಕಾರ್ಡ್ ಸಾಲದ ಮೊತ್ತವನ್ನು 5 ಲಕ್ಷಕ್ಕೆ ಏರಿಕೆ ಮಾಡಲಾಗಿದೆ. ಫಸಲ್ ಭೀಮಾ ಯೋಜನೆಯಡಿಯಲ್ಲಿ 1.75ಲಕ್ಷ ಕೋಟಿ ಹಣವನ್ನು ಕೇಂದ್ರ ಸರ್ಕಾರ ರೈತರಿಗೆ ಪರಿಹಾರ ರೂಪದಲ್ಲಿ ನೀಡಿದೆ. 60ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ರೈತರಿಗೆ ಕಿಸಾನ್ ಮಾರ್ಗ ದತ್ ಯೋಜನೆಯಡಿಯಲ್ಲಿ ಮೂರು ಸಾವಿರ ರೂ. ವೃದ್ಧಾಪ್ಯ ವೇತನ ನೀಡಲಾಗುತ್ತಿದೆ. ಮಣ್ಣು ಪರೀಕ್ಷೆ ಕಾರ್ಡ್ ಗೆ 25 ಕೋಟಿ ಹಣ ಬಿಡುಗಡೆ ಮಾಡಿದೆ. ಹನಿನೀರಾವರಿ ಪ್ರೋತ್ಸಾಹಿಸಲು 93 ಸಾವಿರ ಕೋಟಿ ಹಣವನ್ನು ಬಿಡುಗಡೆ ಮಾಡಿದೆ. ಕಳೆದ ಬಾರಿ ಸಿರಿ ಧಾನ್ಯ ವರ್ಷದಡಿಯಲ್ಲಿ 2,460 ಕೋಟಿ ರೂ. ಬಿಡುಗಡೆ ಮಾಡಿತ್ತು. ಹೀಗೆ ರೈತರ ಬೆನ್ನಿಗೆ ನಿಂತು ಹತ್ತು ಹಲವು ಯೋಜನೆಗಳನ್ನು ಕೇಂದ್ರ ಸರ್ಕಾರ ಜಾರಿಗೆ ತಂದಿದೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರ ರೈತ ಮಕ್ಕಳ ವಿದ್ಯಾನಿಧಿ ಸ್ಕಾಲರ್ ಶಿಪ್ ಹಣವನ್ನು ನಿಲ್ಲಿಸಿದೆ. ರೈತರ ಕಿಸಾನ್ ಸಮ್ಮಾನ್ ಯೋಜನೆಯ 4 ಸಾವಿರ ಹಣ ನಿಲ್ಲಿಸಿದೆ. ಹೀಗೆ ಎಲ್ಲಾ ಯೋಜನೆಗಳ ಹಣ ಬಂದ್ ಮಾಡಿ ಗ್ಯಾರಂಟಿಗಳಿಗೆ ವಿನಿಯೋಗಿಸುತ್ತಿದೆ.

ತಾಲೂಕಿನಲ್ಲಿ ಶೇ.30 ರಾಗಿ ಬೆಳೆ ನಷ್ಟವಾಗಿದೆ. ಇಂದಿನವರೆಗೂ ಪರಿಹಾರ ನೀಡಿಲ್ಲ. ಹೈನುಗಾರಿಕೆಯಲ್ಲಿ ಬಾಕಿ ಉಳಿಸಿಕೊಂಡಿರುವ 620 ಕೋಟಿ ಪ್ರೋತ್ಸಹ ಧನ ಬಿಡುಗಡೆ ಮಾಡಬೇಕು. ಪ್ರತಿ ಲೀಟರ್ ಹಾಲಿನ ಪ್ರೋತ್ಸಾಹ ಧನ 5ರೂ. ದಿಂದ 7 ರೂ.ಗೆ ಹೆಚ್ಚಿಸಬೇಕು. ಬೆಂಬಲ ಬೆಲೆಯಡಿಯಲ್ಲಿ ರಾಗಿ ಖರೀದಿ ಆದ ಮೇಲೆ 30 ದಿನದೊಳಗೆ ಹಣ ನೀಡಬೇಕು. ಮೂವತ್ತು ಸಾವಿರ ಕೋಟಿ ನೀರಾವರಿ ಯೋಜನೆಗೆ ಮೀಸಲಿಡಬೇಕು. ಆದ್ಯತೆ ಮೇರೆಗೆ ಕುಡಿಯುವ ನೀರನ್ನು ಒದಗಿಸಬೇಕು. ಸರ್ಕಾರ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದು ಗೊತ್ತಿಲ್ಲ. ರೈತರಪರ ಚಿಂತನೆ ಮಾಡುವುದನ್ನು ಬಿಟ್ಟು ಕುರ್ಚಿಯದ್ದೇ ಚಿಂತೆ ನಡೆಸುತ್ತಿದೆ. ಮುಖ್ಯಮಂತ್ರಿ ಕುರ್ಚಿಗಾಗಿ ಮ್ಯೂಸಿಕಲ್ ಚೇರ್ ಆಟ ಆಡುತ್ತಿದ್ದಾರೆ ಎಂದರು.

ಈ ವೇಳೆ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಮಕೃಷ್ಣಪ್ಪ, ತಾಲೂಕು ಅಧ್ಯಕ್ಷ ನಾಗೇಶ್, ಸಿ.ಹೆಚ್. ಹನುಮಂತರಾಯಪ್ಪ, ಗೋಪಿ, ಪುಷ್ಪ ಶಿವಶಂಕರ್, ಮುದ್ದಪ್ಪ, ಬಂತಿ ವೆಂಕಟೇಶ್ ಉಪಸ್ಥಿತರಿದ್ದರು.

Printed by: K Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.